EMAIL : dairyadadaari@gmail.com ಸಂಪುಟ: 01 ಸಂಚಿಕೆ: 189

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಬೆಲೆ ರೂ : 2.00
ರಾಯಚೂರು
ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795 ಭಾನುವಾರ: 05-07-2026

## ರಾಜ್ಯದಲ್ಲಿ ಇದುವರೆಗೂ ನಡೆದ ಎಸ್‌ಐಆರ್ ರದ್ದುಗೊಳಿಸುವಂತೆ ಎಚ್‌ಡಿಕೆ ಆಗ್ರಹ

**ಬೆಂಗಳೂರು, ಜು.4–**ಕರ್ನಾಟಕದಲ್ಲಿ ಇದುವರೆಗೂ ನಡೆದಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ಯನ್ನು ರದ್ದುಗೊಳಿಸಬೇಕು ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಭಾರತೀಯ ಚುನಾವಣಾ ಆಯೋಗವನ್ನು ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಈಗಾಗಲೇ ನಡೆದಿರುವ ಎಸ್‌ಐಆರ್‌ಗೆ ಯಾವುದೇ ಅರ್ಥವಿಲ್ಲ. ಕೆಲವೆಡೆ ಮನೆಮನೆಗೆ ತೆರಳಿ ಎಸ್‌ಐಆರ್ ಪ್ರಕ್ರಿಯೆ ಕೈಗೊಳ್ಳುವ ಬದಲು ಕಲ್ಯಾಣ ಮಂಟಪದಲ್ಲಿ ಗಣತಿ ನಮೂನೆಯನ್ನು ನೀಡಲಾಗುತ್ತಿದೆ ಎಂದು ಆರೋಪಿಸಿದರು.ಈ ಸಂಬಂಧ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳಿಗೆ ಜೆಡಿಎಸ್ ವತಿಯಿಂದ ದೂರು ಸಲ್ಲಿಸಲಾಗಿದೆ. ಆದರೆ ಅವರು ಚುನಾವಣಾ ಆಯೋಗಕ್ಕೆ ಕಳುಹಿಸಿಕೊಟ್ಟಿದ್ದು, ಅವರ ನಿರ್ದೇಶನದಂತೆ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ. ಸೋಮವಾರ ದೆಹಲಿಗೆ ತೆರಳಿ ಭಾರತೀಯ ಚುನಾವಣಾ ಆಯೋಗದ ಆಯುಕ್ತರನ್ನು ಭೇಟಿ ಮಾಡಿ ಕರ್ನಾಟಕದಲ್ಲಿ ಎಸ್‌ಐಆರ್‌ಗೆ ಸಂಬಂಧಿಸಿದಂತೆ ನಡೆದಿರುವ ಘಟನೆಗಳ ಸಂಪೂರ್ಣ ವಿವರಗಳನ್ನು ನೀಡಿ ಈಗಾಗಲೇ ನಡೆದಿರುವ ಪ್ರಕ್ರಿಯೆಯನ್ನು ರದ್ದುಗೊಳಿಸುಂತೆ ಒತ್ತಾಯಿಸಲಾಗುವುದು ಎಂದರು.



ಪಾರದರ್ಶಕವಾಗಿ ಎಸ್‌ಐಆರ್ ಪ್ರಕ್ರಿಯೆಯನ್ನು ನಡೆಸುವಂತೆ ಮನವಿ ಮಾಡಲಾಗುವುದು ಎಂದ ಅವರು, ಪ್ರತಿನಿತ್ಯ ಹೇಳಿಕೆ ನೀಡುತ್ತಿದ್ದ ಕೆಪಿಸಿಸಿ ಅಧ್ಯಕ್ಷರು, ಗೃಹ ಸಚಿವರು ಕಲ್ಯಾಣ ಮಂಟಪಗಳಲ್ಲಿ ಎಸ್‌ಐಆರ್‌ಗೆ ಸಂಬಂಧಿಸಿದ ಗಣತಿ ನಮೂನೆಗಳನ್ನು ವಿತರಿಸುತ್ತಿರುವ ಬಗ್ಗೆ ಏನು ಹೇಳುತ್ತಾರೆ? ಎಂದು ಪ್ರಶ್ನಿಸಿದರು. ಸರ್ಕಾರಿ ಅಧಿಕಾರಿಗಳು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದು, ಆಯೋಗದ ಮಾರ್ಗಸೂಚಿಯನ್ನು ಪಾಲಿಸುತ್ತಿಲ್ಲ. ಹಾದಿಬೀದಿಯಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ಆರೋಪಿಸಿದ ಅವರು, ಕೆಪಿಸಿಸಿ ಅಧ್ಯಕ್ಷರು ಹಾಗೂ ಗೃಹಸಚಿವರು ಈಗ ಎಲ್ಲಿ ಹೋಗಿದ್ದಾರೆ? ಎಂದು ವಾಗ್ದಾಳಿ ನಡೆಸಿದರು.

ಪರ್ಯಾಯ ವ್ಯವಸ್ಥೆ ಎಲ್ಲಿ : ಸುಪ್ರಿಂಕೋರ್ಟ್‌ನ ಆದೇಶದ ಹಿನ್ನೆಲೆಯಲ್ಲಿ ಲಕ್ಷಾಂತರ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸುತ್ತಿದ್ದಾರೆ. ಆದರೆ ಅವರಿಗೆ ಪರ್ಯಾಯ ವ್ಯವಸ್ಥೆ ಏನು ಕಲ್ಪಿಸಿದ್ದಾರೆ? ಎಂದು ಪ್ರಶ್ನಿಸಿದರು.

ಕಾನೂನು ಬಗ್ಗೆ ಮಾತನಾಡುವ ಸರ್ಕಾರದವರು ಬೀದಿಬದಿ ವ್ಯಾಪಾರಿಗಳ ಬದುಕಿನ ಬಗ್ಗೆಯೂ ಚರ್ಚೆ ಮಾಡಬೇಕಲ್ಲವೇ? ಅವರಿಗೆ ಪರ್ಯಾಯದ ವ್ಯವಸ್ಥೆ ಹಾಗೂ ಪರಿಹಾರವನ್ನು ನೀಡಬೇಕಾದುದು ಸರ್ಕಾರದ ಜವಾಬ್ದಾರಿಯಲ್ಲವೇ? ಎಂದು ಕೇಳಿದರು.ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್‌ರವರು ಒಂದು ತಿಂಗಳು ಪೂರ್ಣಗೊಳಿಸಿದ್ದಾರೆ. ಈ ಅವಧಿಯಲ್ಲಿ ಘೋಷಣೆ ಮಾಡುವುದನ್ನು ಬಿಟ್ಟರೆ ಏನೂ ಸಾಧನೆ ಮಾಡಿಲ್ಲ. ಒಂದು ತಿಂಗಳಿನಲ್ಲಿ ಅನುಷ್ಠಾನವಾಗಿರುವುದು ಯಾವುದೂ ಇಲ್ಲ.
ಭಾರತ್ ಜೋಡೋ ಹೆಸರಿನಲ್ಲಿ ಅವರ ಪಕ್ಷದ ಕಾರ್ಯಕರ್ತರಿಗೆ ಹಣ ನೀಡುವುದಾಗಿ ಹೇಳಿದ್ದಾರೆ. ಜನರಿಗೆ ತೆರಿಗೆ ಹೊರೆ ಹೊರಿಸುತ್ತಿದ್ದಾರೆ. ದೊಡ್ಡ ಯೋಜನೆಗಳ ಅನುಷ್ಠಾನಕ್ಕೆ ಮುಂದಾಗುವ ಮೂಲಕ ದುಡ್ಡು ಹೊಡೆಯುವ ಕಾರ್ಯಕ್ಕೆ ಚಾಲನೆ ನೀಡುತ್ತಿದ್ದಾರೆ ಎಂದು ಕುಮಾರಸ್ವಾಮಿ ಆರೋಪಿಸಿದರು.

## ರಾಯಚೂರು ಜಿಲ್ಲಾ ಮಹಾತ್ಮ ಗಾಂಧೀಜಿ ಕ್ರೀಡಾಂಗಣದಲ್ಲಿ ಎಸ್‌ಐಆರ್ ಜಾಗೃತಿ ಕಾರ್ಯಕ್ರಮ



ಧೈರ್ಯದ ದಾರಿ

**ರಾಯಚೂರು, ಜು.4:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್‌ನ ಸ್ವೀಪ್ ಸಮಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ ನಗರದ ಜಿಲ್ಲಾ ಮಹಾತ್ಮ ಗಾಂಧೀಜಿ ಕ್ರೀಡಾಂಗಣದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಪಂಚಾಯತ್ ಸಹ ಕಾರ್ಯದರ್ಶಿ ರಾಘವೇಂದ್ರ ಕುಲಕರ್ಣಿ, ಜಿಲ್ಲೆಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ತೆರಳಿ ಮತದಾರರಿಗೆ ನಮೂನೆಗಳನ್ನು ವಿತರಿಸುತ್ತಿದ್ದು, ಪ್ರತಿಯೊಬ್ಬ ಅರ್ಹ ಮತದಾರರು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಕಡ್ಡಾಯವಾಗಿ ಸೇರ್ಪಡೆ ಮಾಡಿಸಿಕೊಳ್ಳುವಂತೆ ಕರೆ ನೀಡಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಈರೇಶ್ ನಾಯಕ ಮಾತನಾಡಿ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಎಸ್‌ಐಆರ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಸಾರ್ವಜನಿಕರಿಗೆ ಹಾಗೂ ಮತದಾರರಿಗೆ ಮಾಹಿತಿ ತಲುಪಿಸುವ ಉದ್ದೇಶದಿಂದ ಈ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.ಜಿಲ್ಲಾ ಸ್ವೀಪ್ ಹಾಗೂ ಎಸ್‌ಐಆರ್ ಕಾರ್ಯಕ್ರಮಗಳ ಸಂಯೋಜನಾಧಿಕಾರಿ ಡಾ. ದಂಡಪ್ಪ ಬಿರಾದಾರ್ ಮಾತನಾಡಿ, ಅತ್ಯಂತ ಸ್ಪಷ್ಟ, ಶುದ್ಧ ಹಾಗೂ ಗೊಂದಲರಹಿತ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದೇ ಎಸ್‌ಐಆರ್ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಈಗಾಗಲೇ ಜಿಲ್ಲೆಯ ಎಲ್ಲಾ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ತೆರಳಿ ನಮೂನೆಗಳನ್ನು ವಿತರಿಸುತ್ತಿದ್ದು, ಈ ಪ್ರಕ್ರಿಯೆಯು ಜೂನ್ 30ರಿಂದ ಜುಲೈ 29, 2026ರವರೆಗೆ ನಡೆಯಲಿದೆ. ಬಳಿಕ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿ ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಸ್ವೀಕರಿಸಲಾಗುವುದು. ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 7ರಂದು ಪ್ರಕಟಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.

ಮತದಾರರು ನಮೂನೆಗಳನ್ನು ಭರ್ತಿ ಮಾಡಿ ಬಿಎಲ್‌ಒಗಳಿಗೆ ಸಲ್ಲಿಸುವುದರೊಂದಿಗೆ, ಸಲ್ಲಿಕೆಯ ಸ್ವೀಕೃತಿ ಪತ್ರವನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ಚುನಾವಣಾ ಆಯೋಗದ ನಿಯಮಗಳನ್ನು ಪಾಲಿಸಿ, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಪ್ರತಿಯೊಬ್ಬ ಅರ್ಹ ನಾಗರಿಕರೂ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವಿವಿಧ ಕ್ರೀಡಾ ತರಬೇತಿದಾರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

### ಗ್ರಾಮೀಣ ಭಾಗದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ

## ವಿದ್ಯಾರ್ಥಿಗಳು ಚೆನ್ನಾಗಿ ಓದಿ, ಸಮಾಜದಲ್ಲಿ ಉನ್ನತ ಸ್ಥಾನಮಾನ ಪಡೆಯರಿ: ಶಾಸಕ ಬಸನಗೌಡ ದದ್ದಲ್







ಧೈರ್ಯದ ದಾರಿ

**ರಾಯಚೂರು ಜುಲೈ 04:** ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಜುಲೈ 04ರ ಶನಿವಾರ ದಂದು ರಾಯಚೂರು ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯಲ್ಲಿ ಮಿಂಚಿನ ಸಂಚಾರ ಆರಂಭಿಸಿ, ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ವೀಕ್ಷಣೆ ಮಾಡಿ, ಪರಿಶೀಲನೆ ಮಾಡಿದರು.
ಬೆಳಿಗ್ಗೆ 09ಗಂಟೆಗೆ ರಾಯಚೂರು ನಗರದ ಮಂತ್ರಾಲಯ ರಸ್ತೆಯ ಶಾಸಕರ ಕಾರ್ಯಾಲಯದಿಂದ ಹೊರಟ ಶಾಸಕರು ನೇರವಾಗಿ ಚಂದ್ರಬಂಡ ಜಿಲ್ಲಾ ಪಂಚಾಯತ ವ್ಯಾಪ್ತಿಯ ಕಡಗಂದೊಡ್ಡಿ ಗ್ರಾಮದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ನೂತನ ಬಸ್ ಅನ್ನು ಉದ್ಘಾಟನೆ ಮಾಡಿದರು. ನಂತರ ಮಾತನಾಡಿ, ವಿದ್ಯಾರ್ಥಿಗಳು ಬಸ್ ಸೌಲಭ್ಯವನ್ನು ಸರಿಯಾಗಿ ಬಳಸಿಕೊಳ್ಳಬೇಕು. ಅಲ್ಲದೆ ವಿದ್ಯಾರ್ಥಿಗಳು ಚೆನ್ನಾಗಿ ಓದಿ, ಸಮಾಜದಲ್ಲಿ ಉನ್ನತ ಸ್ಥಾನಮಾನ ಪಡೆಯಬೇಕು. ತಂದೆ ತಾಯಿಗೆ ಒಳ್ಳೆಯ ಹೆಸರು ತರುವಂತೆ ಸಾಧನೆ ಮಾಡಬೇಕು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.
ನಂತರ ಚಂದ್ರಬಂಡದ ಡಿ.ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿ, ವಸತಿ ನಿಲಯದ ಸೌಲಭ್ಯವನ್ನು ಪರಿಶೀಲನೆ ಮಾಡಿ, ನಿಲಯದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ವಸತಿ ನಿಲಯದ ಊಟ ಉಪಚಾರದ ಕುರಿತು ಮಾಹಿತಿ ಪಡೆದರು. ವಿದ್ಯಾರ್ಥಿಗಳಿಗೆ ಬೇಕಾಗುವ ಮೂಲಭೂತ ಸೌಕರ್ಯಗಳನ್ನು ಕೂಡಲೇ ಒದಗಿಸಬೇಕು ಎಂದರು. ನಂತರ ಅಡುಗೆ ಕೊಠಡಿಗೆ ಭೇಟಿ ನೀಡಿ, ತರಕಾರಿ, ರೇಷನಗಳನ್ನು ಪರಿಶೀಲಿಸಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರವನ್ನು ನೀಡಬೇಕು. ಮೆನು ಚಾರ್ಟ್ ಪ್ರಕಾರ ವಿವಿಧ ಆಹಾರವನ್ನು ಮಾಡಬೇಕು ಎಂದರು. ನಂತರ ವಸತಿ ನಿಲಯದ ಶುದ್ಧ ಕುಡಿಯುವ ನೀರಿನ ಘಟಕವನ್ನು ಪರಿಶೀಲಿಸಿದರು. ನಂತರ ಅಕ್ಷರ ಪಾತ್ರ ಕೊಠಡಿಗೆ ಭೇಟಿ ನೀಡಿ, ವಿವಿಧ ಪುಸ್ತಕಗಳನ್ನು ವೀಕ್ಷಣೆ ಮಾಡಿ, ವಿದ್ಯಾರ್ಥಿಗಳಿಗೆ ಬೇಕಾಗುವ ಪುಸ್ತಕಗಳನ್ನು ಪೂರೈಕೆ ಮಾಡಬೇಕು ಎಂದರು.
ಚಂದ್ರಬಂಡದಲ್ಲಿ ನೂತನ ರೈತರ ಸಂಪರ್ಕ ಕೇಂದ್ರ ಸ್ಥಾಪಿಸಲು ಜಾಗ ಗುರುತಿಸಲಾಗಿದೆ. ಕೃಷಿ ಇಲಾಖೆಯ ಅಧಿಕಾರಿಗಳು ಜಾಗವನ್ನು ಸರ್ವೆ ಮಾಡಿದ ನಂತರ ನೂತನ ರೈತ ಸಂಪರ್ಕ ಕೇಂದ್ರದ ಕಟ್ಟಡಕ್ಕೆ ಭೂಮಿ ಪೂಜಾ ನೆರವೇರಿಸಲಾಗುತ್ತದೆ ಎಂದರು.
ರಾಯಚೂರಿನ ಚಂದ್ರಬಂಡ ವ್ಯಾಪ್ತಿಯಲ್ಲಿ ಸುಮಾರು ಕಟ್ಟಲಪೂರ ಕ್ರಾಸ್ ನಿಂದ ತೆಲಂಗಾಣದ ಬೌಂಡರಿಬರಿಗೂ ಸುಮಾರು 30 ಕಿ.ಮೀ ರಸ್ತೆ ನಿರ್ಮಾಣಕ್ಕಾಗಿ 14 ಕೋಟಿ ರೂ.ವೆಚ್ಚದಲ್ಲಿ ಉತ್ತಮ ಗುಣಮಟ್ಟದ ರಸ್ತೆ ನಿರ್ಮಾಣ ಮಾಡಲಾಗಿದೆ ಎಂದು ಗ್ರಾಮೀಣ ಕ್ಷೇತ್ರದ ಶಾಸಕರು ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿದರು.
ನಂತರ ಡಿ.ರಾಂಪೂರ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಕೃಷ್ಣ ನದಿ ಬ್ರಿಜ್ ಕಾಮಗಾರಿಯನ್ನು ವೀಕ್ಷಣೆ ಮಾಡಿದರು. ಸಣ್ಣಪುಟ್ಟ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಿ , ಸಾರ್ವಜನಿಕರ ಉಪಯೋಗಕ್ಕೆ ಅನುವು ಮಾಡಿಕೊಡಬೇಕು.
ನಂತರ ಕುರ್ವಕಲಾ ಬ್ರಿಜ್ ಗೆ ಭೇಟಿ, ಮಾತನಾಡಿ, ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಮೂರು ಐಲ್ಯಾಂಡ್ ಗಳನ್ನು ಬರುತ್ತವೆ. ಮಳೆ ಬಂದಂತಹ ಸಮಯದಲ್ಲಿ ರೈತರ ಬೆಳೆಗಳನ್ನು ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ತರಲು ಕಷ್ಟವಾಗಿತ್ತು. ಈ ಭಾಗದಲ್ಲಿ ಎರಡು ಬ್ರಿಜ್ ಗಳನ್ನು ನಿರ್ಮಿಸಲಾಗಿದೆ. ನಾರಾದ ಗಡ್ಡೆ ಕರ್ನಾಟಕ, ಮಹಾರಾಷ್ಟ್ರ, ಆಂಧ್ರ ಹಾಗೂ ತೆಲಂಗಾಣ ರಾಜ್ಯದಿಂದ ಸಾವಿರಾರು ಜನರು ದರ್ಶನಕ್ಕೆ ಬರುವ ಕಾರಣ ನಾರಾದ ಗಡ್ಡೆಯನ್ನು ಪ್ರವಾಸ ತಾಣವಾಗಿ ಮಾಡಲು ಜಿಲ್ಲಾಡಳಿತದೊಂದಿಗೆ ಅಗತ್ಯ ಕ್ರಮ ವಹಿಸಲಾಗಿದೆ. ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಒಟ್ಟು ಮೂರು ಐಲೆಂಡ್ ಗಳು ಇವೆ. ಈ ಭಾಗದಲ್ಲಿ ಮೊಸಳೆ ಪಾರ್ಕ್ 9 ನಿರ್ಮಿಸಲು 2ನೇಪುಟಕ್ಕೆ

## ಹೆಚ್‌ಐವಿ ಮುಕ್ತ ಭಾರತ-2030ರ ಗುರಿಗೆ ಎಲ್ಲಾ ಇಲಾಖೆಗಳ ಸಮನ್ವಯ ಅಗತ್ಯ: ಡಾ.ಗಿರಿಜಾ ತಾಯಿ

ಧೈರ್ಯದ ದಾರಿ



**ರಾಯಚೂರು ಜುಲೈ 04:**ಸಮಾಜದಲ್ಲಿ ಕಳಂಕ ತಾರತಮ್ಯವನ್ನು ಉಂಟು ಮಾಡುವ ಹಾಗೂ ಇತ್ತೀಚಿನ ದಿನಗಳಲ್ಲಿ ಹದಿಹರೆಯದವರಲ್ಲಿ ಹೆಚ್ಚುತ್ತಿರುವ ಪ್ರಕರಣಗಳ ನಿಯಂತ್ರಣಕ್ಕಾಗಿ ಜಾಗೃತಿ ಕೈಗೊಳ್ಳಲು ಹಾಗೂ ಹೆಚ್‌ಐವಿ ಮುಕ್ತ ಭಾರತ ಎಂಬ ರಾಷ್ಟ್ರೀಯ ಗುರಿಯನ್ನು 2030ರ ಒಳಗೆ ತಲುಪಲು ಕೇವಲ ಆರೋಗ್ಯ ಇಲಾಖೆಯಿಂದ ಮಾತ್ರ ಸಾಧ್ಯವಿಲ್ಲ. ಸರ್ಕಾರದ ಎಲ್ಲಾ ಇಲಾಖೆಗಳು ಸಮನ್ವಯದೊಂದಿಗೆ ಜಂಟಿ ಹೋರಾಟ ರೂಪಿಸಬೇಕಾಗಿದೆ ಎಂದು ಬೆಂಗಳೂರಿನ ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆಯ ಮೂಲಸೌಕರ್ಯವಿಭಾಗದ ಜಂಟಿ ನಿರ್ದೇಶಕರಾದ ಡಾ.ಗಿರಿಜಾ ತಾಯಿ ಅವರು ಹೇಳಿದರು.
ಬೆಂಗಳೂರಿನ ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆಯ ನಿರ್ದೇಶನದಂತೆ ರಾಯಚೂರು ಜಿಲ್ಲೆಯಲ್ಲಿ ಹೆಚ್‌ಐವಿ ಕಾರ್ಯ ಚಟುವಟಿಕೆಗಳ ಪರಿಶೀಲನೆಗಾಗಿ ರಾಜ್ಯ ತಂಡದೊಂದಿಗೆ ಜಿಲ್ಲೆಗೆ ಆಗಮಿಸಿ, ರೀಮ್ಸ್ ಬೋಧಕ ಆಸ್ಪತ್ರೆ, ಪಿಹೆಚ್‌ಸಿ ಗುಂಜಳ್ಳಿ, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ, ಜಿಲ್ಲಾ ಔಷಧಿ ಉಗ್ರಾಣ, ಹೆಚ್‌ಐವಿ ಅಪಾಯದ ಅಂಚಿನಲ್ಲಿರುವ ಜನತೆಗೆ ಮಧ್ಯಸ್ಥಿಕೆವಹಿಸಿ ಜಾಗೃತಿ ನೀಡುತ್ತಿರುವ ಹೊಸಬೆಳಕು ಸಂಸ್ಥೆ, ಎಆರ್ಟಿ, ಡಿಎಸ್‌ಆರ್‌ಸಿ, ಐಸಿಟಿಸಿ ಕೇಂದ್ರಗಳಿಗೆ ಬೇಟಿ ನೀಡಿ, ಮಾತನಾಡಿದರು. 2ನೇ ಪುಟಕ್ಕೆ

## ಎಸ್‌ಐಆರ್ ಬಗ್ಗೆ ಶಾಮ್ ಖಾನಾಪುರದಿಂದ ವಿಡಿಯೋ ಕ್ಲಿಪ್ ರೂಪಕ ಎ.ಸಿ ಅವರಿಂದ ಮೆಚ್ಚುಗೆ

ಧೈರ್ಯದ ದಾರಿ

ಸಮಾಜದಲ್ಲಿ ನಡೆಯುತ್ತಿರುವ ಹಲವಾರು ಅಂಶಗಳನ್ನು ಅರ್ಥಗರ್ಭಿತವಾಗಿ ಮತ್ತು ಹಾಸ ಭರಿತವಾಗಿ ಜನಸಾಮಾನ್ಯರ ಮನಸ್ಸು ಮುಟ್ಟುವಂತೆ ಜೊತೆಗೆ ಹಲವಾರು ಪ್ರಚಲಿತ ಅಂಶಗಳ ಬಗ್ಗೆ ತಮ್ಮದಾದ ರೀತಿಯಲ್ಲಿ ಅವುಗಳನ್ನು ಸಿದ್ಧಪಡಿಸಿ ಜನಮಚ್ಚಿಗೆಯನ್ನ ಗಳಿಸಿದ ಹಾಸ್ಯ ಮತ್ತು ರಂಗಭೂಮಿ ಕಲಾವಿದರಾದ ಶಾಮ್ ಖಾನಾಪುರವರು ಶರಣಗೌಡ ಮಚ್ಚೆಟ್ಟಾಳ ಮಹೇಶ್ ಗಾಯಕ್ವಾಡ್ ಇವರಿಂದ ಪ್ರಸ್ತುತ ಮತದಾರ ಪಟ್ಟಿಯ ಸಮಗ್ರ ಪರಿಷ್ಕರಣಿಯ ಕಾರ್ಯಕ್ರಮ ಕಕುರಿತು ಜನಸಾಮಾನ್ಯರಲ್ಲಿ ಮುಟ್ಟುವಂತೆ ಜಾಗೃತಿಯ ಒಂದು ಕಾರ್ಯಕ್ರಮದ ರೂಪಕ ವಿಡಿಯೋವನ್ನು ರಾಯಚೂರಿನ ಸಹಾಯಕ ಆಯುಕ್ತರಾದ ಕಂದಾಯ ಉಪಯೋಗದ ದಂಡಾಧಿಕಾರಿಗಳಾದ ಡಾ.ಅಂಪಣ್ಣ ಸಜ್ಜನ್ ಅವರು ವೀಕ್ಷಣೆ ಮಾಡಿ ಮೆಚ್ಚುಗೆಯನ್ನ ವ್ಯಕ್ತಪಡಿಸಿದರು. ನೀವು ಉತ್ತಮ ಕಲಾವಿದರಾಗಿದ್ದು ಇನ್ನೂ ಎಸ್‌ಐಆರ್ ಬಗ್ಗೆ ಹಲವಾರು ಅಂಶಗಳು ಇವೆ .ಅವುಗಳನ್ನ ಬೇರೆ ಬೇರೆ ರೀತಿಯಲ್ಲಿ ತಾವು ವಿಡಿಯೋ ಕ್ಲಿಪ್ ಮಾಡಿರಿ ತಮ್ಮ ಈ ಒಂದು ಜಿಲ್ಲಾಡಳಿತದ ಜೊತೆಗೆ ತಮ್ಮ ಕಾರ್ಯಕ್ಕೆ ಅಭಿನಂದನೆಗಳು ಎಂದು ಹೇಳಿದರು.



ಈ ಸಂದರ್ಭದಲ್ಲಿ ಮಹೇಶ್ ಕ್ವಾಡ್ ಹಾಗೂ ಎಸ್‌ಐಆರ್ ಕಾರ್ಯಕ್ರಮದ ನೋಡಲಾಧಿಕಾರಿ ಡಾ. ದಂಡಪ್ಪ ಬಿರಾದಾರ ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

## ಹೆಚ್ಐವಿ ಮುಕ್ತ ಭಾರತ-2030ರ ಗುರಿಗೆ ಎಲ್ಲಾ ಇಲಾಖೆಗಳ ಸಮನ್ವಯ ಅಗತ್ಯ: ಡಾ.ಗಿರಿಜಾ ತಾಯಿ

ರಾಜ್ಯಾದ್ಯಂತ ಪ್ರತಿ ಜಿಲ್ಲೆಗೂ ತಂಡ ಬೇಟಿ ನೀಡುತ್ತಿದ್ದು, ನಾವೆಲ್ಲರೂ ಹೆಚ್ಐವಿ ಹರಡುವ ನಾಲ್ಕು ಮಾರ್ಗಗಳ ಕುರಿತು ಜನತೆಗೆ ಅರಿವು ಮೂಡಿಸುವ, ಹದಿಹರೆಯದವರ ಆರೋಗ್ಯ ಕಾಪಾಡುವ ಹೊಣೆಗಾರಿಕೆ ನಮ್ಮ ಮೇಲಿದೆ ಎಂದು ತಿಳಿಸಿದರಲ್ಲದೆ, ಹೆಚ್ಚುತ್ತಿರುವ ಹೆಚ್ಐವಿ ಸೋಂಕಿತರ ಸಂಖ್ಯೆ ತಡೆಗಟ್ಟಲು, ಅದರಲ್ಲೂ ಯುವಜನತೆಯು ಬಲಿಯಾಗುವುದನ್ನು ನಿಯಂತ್ರಿಸಲು ಆರೋಗ್ಯ ಇಲಾಖೆಯೊಂದಿಗೆ ವಿವಿಧ ಮುಂಚೂಣಿ ಇಲಾಖೆಗಳು ಸಮಾನತೆಯಿಂದ ಕೆಲಸ ಮಾಡಬೇಕಿದೆ. ಇದಕ್ಕಾಗಿ ಕೆಸೆಪ್ಸ್ ಅಡಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಸೇವಾ ಕೇಂದ್ರಗಳು ಸಮರ್ಪಕವಾಗಿ ಕೆಲಸ ನಿರ್ವಹಣೆಗೆ ತರಬೇತಿ, ಪರೀಕ್ಷೆ, ಜಾಗೃತಿ ನೀಡಲು ಸೂಚಿಸಿದರು.

ಮೊಬಲೈಜೇಷನ್ ಏಡ್ಸ್ ಸುರಕ್ಷಾ ಅಭಿಯಾನ ಭಾರತ ಸರಕಾರದ ಮಾರ್ಗಸೂಚಿಯಂತೆ ಮೊಬಲೈಜೇಷನ್ ಏಡ್ಸ್ ಸುರಕ್ಷಾ ಅಭಿಯಾನದ 95, 95, 99ರ ಗುರಿಯ ರಾಷ್ಟ್ರೀಯ ಮಾನದಂಡದಡಿ ಅಪಾಯಕಾರಿ ಇರುವ ಪ್ರದೇಶಗಳಲ್ಲಿ, ಹಾಗೂ ಪದವಿ ಕಾಲೇಜುಗಳಲ್ಲಿ ರೆಡ್ರಿಬ್ಬನ್ ಕ್ಲಬ್ ಮೂಲಕ ಹೆಚ್ಐವಿ ಏಡ್ಸ್ ಕುರಿತು ಅರಿವು, ಕ್ಯೂಆರ್ ಕೊಡ್ ಬಳಸಿ ಸ್ವಯಂ ಮೌಲ್ಯಮಾಪನ ಕೈಗೊಳ್ಳಲು ಹೆಚ್ಚಿನ ಜಾಗೃತಿ ನೀಡಲು ತಿಳಿಸಿದರು.

ಇದೇ ಸಂದರ್ಭದಲ್ಲಿ ಹಣಕಾಸು ಜಂಟಿ ನಿರ್ದೇಶಕಿ ಲಲಿತಾ, ಮೂಲಸೌಕರ್ಯ ಉಪ ನಿರ್ದೇಶಕ ಡಾ ಹನುಮಂತರಾಯಪ್ಪ, ಸಹಾಯಕ ನಿರ್ದೇಶಕರು ಟಿಐ ಜ್ಯೋತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿ ಡಾ.ಮಹಮ್ಮದ್ ಶಾಕೀರ್, ಜಿಲ್ಲಾ ಏಡ್ಸ್ ಮೇಲ್ವಿಚಾರಕ ಮಲ್ಲಯ್ಯ ಮಠಪತಿ, ಸೇರಿದಂತೆ ಡ್ಯಾಪ್ಕೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಜುಲೈ 10ರಂದು ರಾಯಚೂರು ತಾಲೂಕಿನಲ್ಲಿ ಜಪ್ತಿ ಮಾಡಲಾದ ಆಹಾರ ಧಾನ್ಯಗಳ ಬಹಿರಂಗ ಹರಾಜು ಪ್ರಕ್ರಿಯೆ

ಧೈರ್ಯದ ದಾರಿ

**ರಾಯಚೂರು ಜುಲೈ 04:** ಜಿಲ್ಲೆಯ ರಾಯಚೂರು ತಾಲೂಕು ಆಹಾರ ಇಲಾಖೆಯಿಂದ ಸಗಟು ಗೋದಾಮುಗಳಲ್ಲಿ ವಿವಿಧ ಪ್ರಕರಣಗಳಲ್ಲಿ ಜಪ್ತಿ ಮಾಡಲಾದ 780.33 ಕ್ವಿಂಟಾಲ್ ಅಕ್ಕಿ ಹಾಗೂ 1.60 ಕ್ವಿಂಟಾಲ್ ಜೋಳದ ಆಹಾರ ಧಾನ್ಯಗಳನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ಜುಲೈ 10ರ ಬೆಳಿಗ್ಗೆ 12ಗಂಟೆಗೆ ರಾಯಚೂರಿನ ಶಕ್ತಿನಗರ ರಸ್ತೆಯ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಕಾಟನ್ ಮಾರ್ಕೆಟ್ ಸಗಟು ಮಾರಾಟ ಮಳಿಗೆಯಲ್ಲಿ ಬಹಿರಂಗ ಹರಾಜು ಪ್ರಕ್ರಿಯೆ ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದಾಗಿದೆ ರಾಯಚೂರು ತಹಶೀಲ್ದಾರರಾದ ಸುರೇಶ ವರ್ಮಾ ಅವರು ತಿಳಿಸಿದ್ದಾರೆ.

ಬಹಿರಂಗ ಹರಾಜು ಷರತ್ತುಗಳು: ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎಪಿಎಂಸಿ ಪರವಾನಿಗೆದಾರರು ಅಥವಾ ಪರವಾನಿಗೆ ಪಡೆದ ಸಗಟು ಅಥವಾ ಚಿಲ್ಲರೆ ವ್ಯಾಪಾರಿಗಳು, ಕಮಿಷನ್ ಏಜೆಂಟರ್, ಅಕ್ಕಿ ಗಿರಣಿ ಮಾಲೀಕರು ಹಾಗೂ ದೊಡ್ಡ ಪ್ರಮಾಣದಾರ ಬಳಕೆದಾರ ಸಂಸ್ಥೆಗಳು ಆಗಿರಬೇಕು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಬಹಿರಂಗ ಹರಾಜು ದಿನ ಪೂರ್ವಾಹ್ನ 10ಗಂಟೆಯೊಳಗಾಗಿ ಹರಾಜು ಸ್ಥಳದಲ್ಲಿ ಹಾಜರಾಗಿ ಹೆಸರನ್ನು ನೋಂದಾಯಿಸಿಕೊಳ್ಳುವುದು ಹಾಗೂ 20,000 ರೂ.ಗಳನ್ನು (ಇಪತ್ತು ಸಾವಿರ ರೂಗಳ) ಇ.ಎಂ.ಡಿ ಮೊತ್ತವನ್ನು ಮುಂಗಡವಾಗಿ ಪಾವತಿಸಬೇಕು.

ಇ.ಎಂ.ಡಿ ಮೊತ್ತವನ್ನು ಜಿಲ್ಲಾಧಿಕಾರಿಗಳು ರಾಯಚೂರು ಅವರ ಹೆಸರಿನಲ್ಲಿ ಡಿಡಿ ಮೂಲಕ ಪಾವತಿಸತಕ್ಕದ್ದು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎರಡು ಪಾಸ್ ಪೋರ್ಟ್ ಸೈಜ್ ಭಾವಚಿತ್ರ, ಪರವಾನಿಗೆ ತಮ್ಮ ವ್ಯಾಪಾರಿ ನೋಂದಣಿ ಪತ್ರ ಅಥವಾ ಸಂಸ್ಥೆ ನೋಂದಣಿ ಪತ್ರ, ಆಧಾರ್ ಕಾರ್ಡಿನ ಪ್ರತಿಯನ್ನು ಹಾಜರುಪಡಿಸಿ ಹರಾಜಿನಲ್ಲಿ ಭಾಗವಹಿಸುವುದು.

ಹರಾಜು ಮುಗಿದ ನಂತರ ಠೇವಣಿ ಮೊತ್ತವನ್ನು ಗರಿಷ್ಠ ಹಾಗೂ ಎರಡನೇ ಗರಿಷ್ಠ ಬಿಡ್ಡುದಾರರನ್ನು ಹೊರತುಪಡಿಸಿ ಉಳಿದ ಬಿಡ್ಡುದಾರರಿಗೆ ಸ್ಥಳದಲ್ಲಿಯೇ ಹಿಂದಿರುಗಿಸಲಾಗುವುದು. ಗರಿಷ್ಠ ಬಿಡ್ಡುದಾರರು ನಿಗದಿತ ಅವದಿಯೊಳಗೆ ಪೂರ್ಣ ಹಣವನ್ನು ಪಾವತಿಸಲು ವಿಫಲವಾದಲ್ಲಿ ಠೇವಣಿ ಹಣವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ನಂತರ ಎರಡನೇ ಬಿಡ್ಡುದಾರರಿಗೆ ಅವಕಾಶ ಮಾಡಿಕೊಡಲಾಗುವುದು ಇವರಿಗೆ ಸಹ ಇದೇ ನಿಯಮ ಅನ್ವಯವಾಗುತ್ತದೆ.

ಅಗತ್ಯ ವಸ್ತುಗಳ ಕಾಯ್ದೆಯಡಿಯಲ್ಲಿ ಪ್ರಕರಣಕ್ಕೆ ಒಳಗಾಗಿರುವ ವ್ಯಕ್ತಿ, ಸಂಸ್ಥೆಗಳು, ವ್ಯಾಪಾರಿಗಳು, ಸಾರ್ವಜನಿಕ ವಿತರಣಾ ಪದ್ದತಿ ವ್ಯವಸ್ಥೆಯಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವವರು ಹರಾಜಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಜಪ್ತಿ ಮಾಡಲಾದ ಆಹಾರ ಧಾನ್ಯಗಳನ್ನು ಎಲ್ಲಿದೆಯೋ ಅಲ್ಲಿ ಹಾಗೂ ಹೇಗಿವೆಯೋ ಹಾಗೆ ಷರತ್ತಿನಡಿ ಹರಾಜು ಮಾಡಲಾಗುತ್ತಿರುವುದರಿಂದ ಹರಾಜಿನಲ್ಲಿ ಭಾಗವಹಿಸುವವರು ಅದಕ್ಕೂ ಮುನ್ನ ಸಗಟು ಮಾರಾಟ ಮಳಿಗೆ 12ಗಂಟೆಗೆಯೊಳಗೆ ಭೇಟಿ ನೀಡಿ ಆಹಾರ ಧಾನ್ಯಗಳ ಗುಣಮಟ್ಟವನ್ನು ಪರಿಶೀಲನೆ ಮಾಡತಕ್ಕದ್ದು.

ಬಹಿರಂಗ ಹರಾಜಿನಲ್ಲಿ ಬರುವ ಸ್ಪರ್ಧಾತ್ಮಕ ದರಗಳನ್ನು ಒಪ್ಪುವ ಅಥವಾ ತಿರಸ್ಕರಿಸುವ ಅಥವಾ ಈ ಹರಾಜವನ್ನು ರದ್ದುಪಡಿಸುವ ಅಧಿಕಾರವನ್ನು ಕಾಯ್ದಿರಿಸಲಾಗಿದೆ. ಆಯಾ ತಾಲ್ಲೂಕಿನ ತಹಶೀಲ್ದಾರರು, ಆಹಾರ ಸಿಬ್ಬಂದಿಯವರು ಮತ್ತು ಗೋದಾಮು ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ ಅವರ ಸಮಕ್ಷಮದಲ್ಲಿ ಬಹಿರಂಗ ಹರಾಜನ್ನು ಮಾಡಲಾಗುವುದು.

ಬಿಡ್‌ನಲ್ಲಿ ನಮೂದಾಗುವ ದರಗಳನ್ನು ಜಿಲ್ಲಾಧಿಕಾರಿಗಳು ಅನುಮೋದಿಸಿದ ನಂತರ ಬಿಡ್‌ನ ಒಟ್ಟು ಮೌಲ್ಯವನ್ನು ಸರ್ಕಾರದ ಲೆಕ್ಕ ಶಿರ್ಷಿಕೆಗೆ ನಿಗದಿತ ದಿನಾಂಕದೊಳಗಾಗಿ ಜಮಾ ಮಾಡಿ ಚಲನದ ಹರಾಜುಪಡಿಸಿದ ನಂತರ ಹರಾಜಾದ ಪದಾರ್ಥ ಎತ್ತುವಳಿಗೆ ಅವಕಾಶ ನೀಡಲಾಗುವುದು.

ಎಪಿಎಂಸಿ ಸೆಸ್ ಮತ್ತು ಇತರೆ ಯಾವುದಾದರೂ ಶುಲ್ಕವನ್ನು ಸರ್ಕಾರಕ್ಕೆ ಕಟ್ಟಬೇಕಾದಲ್ಲಿ ಹರಾಜಿನಲ್ಲಿ ಆಯ್ಕೆಯಾದ ಬಿಡ್‌ದಾರರ ಪಾವತಿಸತಕ್ಕದ್ದು. ಬಹಿರಂಗ ಹರಾಜಾದ ಆಹಾರ ಧಾನ್ಯಗಳನ್ನು ತಮ್ಮ ಸ್ವಂತ ಖರ್ಚಿನಲ್ಲಿ ಆದೇಶ ನೀಡಿದ 3 ದಿನಗಳಲ್ಲಿ ತಾಲ್ಲೂಕಿನ ಸಗಟು ಗೋದಾಮುಗಳಿಂದ ಎತ್ತುವಳಿ ಮಾಡಬೇಕು.

ಹೆಚ್ಚಿನ ಮಾಹಿತಿ ಅಥವಾ ಷರತ್ತುಗಳನ್ನು ಉಪ ನಿರ್ದೇಶಕರ ಕಚೇರಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ರಾಯಚೂರು, ಅಥವಾ ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ರಾಯಚೂರು ಅಥವಾ ರಾಯಚೂರು ತಹಶೀಲ್ದಾರರ ಕಚೇರಿಗಳಿಗೆ ಭೇಟಿ ನೀಡಿ ವಿವರಗಳನ್ನು ಪಡೆಯಬಹುದಾಗಿದೆ ಎಂದು ರಾಯಚೂರು ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್ ಅವರಿಂದ ಪೋಸ್ಟರ್ ಬಿಡುಗಡೆ



ಧೈರ್ಯದ ದಾರಿ

**ರಾಯಚೂರು ಜುಲೈ 04:** ರಾಯಚೂರು ಪ್ರಕೃತಿ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಜುಲೈ 03ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕೃಷಿ ಇಲಾಖೆಯ ವತಿಯಿಂದ ಪ್ರಸ್ತುತ ಸಾಲಿನ ಮುಂಗಾರು ಹಂಗಾಮಿನಲ್ಲಿ ಪ್ರಧಾನ ಮಂತ್ರಿ ಫಸಲ ಬಿಮಾ (ವಿಮೆ) ಯೋಜನೆಯ ಹಾಗೂ ವಿವಿಧ ರಸಗೊಬ್ಬರ ದರಗಳ ಪಟ್ಟಿ ಕುರಿತು ಪೋಸ್ಟರ್ ಬಿಡುಗಡೆ ಮಾಡಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವಾಣ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಕೃಷಿ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

## ಚಿಕಿತ್ಸಾ ವೆಚ್ಚ ಭರಿಸಲಿರುವ ಸರ್ಕಾರ



**ಬೆಂಗಳೂರು, ಜು.4:** ಕೆ.ಆರ್.ವೃತ್ತದಲ್ಲಿ ನಡೆದ ಬಿಎಂಟಿಸಿ ಬಸ್ ಗಳ ನಡುವಿನ ಅಪಘಾತದಲ್ಲಿ ಗಾಯಗೊಂಡು ಸೆಂಟ್ ಮಾರ್ಥಾಸ್ ಆಸ್ಪತ್ರೆಗೆ ದಾಖಲಾಗಿರುವ ಚಾಲಕ ಮತ್ತು ಪ್ರಯಾಣಿಕರನ್ನು ಸಾರಿಗೆ ಸಚಿವ ಬೈರತಿ ಸುರೇಶ್ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು.ಬಳಿಕ ವೈದ್ಯರಿಂದಲೂ ಮಾಹಿತಿ ಪಡೆದುಕೊಂಡಿದ್ದಾರೆ.

ಗಾಯಗೊಂಡವರ ಆರೋಗ್ಯ ವಿಚಾರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಾರಿಗೆ ಸಚಿವರು, ಅಪಘಾತದ ಬಗ್ಗೆ ಮಾಹಿತಿ ಪಡೆದ ಅವರು, ಗಾಯಾಳುಗಳ ಸಂಪೂರ್ಣ ಚಿಕಿತ್ಸಾ ವೆಚ್ಚವನ್ನು ಸರ್ಕಾರ ಭರಿಸಲಿದೆ. ಅಗತ್ಯ ಬಿದ್ದರೆ ಗಾಯಾಳುಗಳಿಗೆ ಸೂಕ್ತ ಪರಿಹಾರ ನೀಡುವ ಬಗ್ಗೆ ಪರಿಶೀಲಿಸಲಾಗುವುದು ಎಂದು ಹೇಳಿದರು..ಎರಡೂ ಎಲೆಕ್ಟ್ರಿಕ್ ಬಸ್ ಗಳ ನಡುವೆ ಈ ಅಪಘಾತ ಸಂಭವಿಸಿದೆ.ಯಾವ ಕಾರಣಕ್ಕೆ ಈ ಘಟನೆ ನಡೆದಿದೆ ಎಂಬುದನ್ನು ಪರಿಶೀಲಿಸಲಾಗುತ್ತಿದೆ. ಈ ಎಲೆಕ್ಟ್ರಿಕ್ ಬಸ್ ಗಳನ್ನು ತೆಗೆದುಕೊಳ್ಳುವ ಬಗ್ಗೆ ಸಾಧಕ ಬಾಧಕಗಳ ಬಗ್ಗೆ ಗಂಭೀರವಾಗಿ ಅಧ್ಯಯನ ನಡೆಸಿ ನಿರ್ಧಾರ ಕೈಗೊಳ್ಳಲಾಗುತ್ತದೆ.ಜೊತೆಗೆ ಇನ್ನು ಮುಂದೆ ಚಾಲಕರು ಬಸ್ ಚಾಲನೆಯನ್ನು ಜಾಗರೂಕತೆಯಿಂದ ಮಾಡಬೇಕೆಂದು ಅವರು ನಿರ್ದೇಶನ ನೀಡಿದರುಇನ್ನು ಕೆ.ಆರ್ ಸರ್ಕಲ್‌ನಲ್ಲಿ ಬೆಳಗ್ಗೆ ಎರಡು ಇವಿ ಬಿಎಂಟಿಸಿ ನಡುವೆ ಅಪಘಾತ ಸಂಭವಿಸಿದೆ. ಅವಘಡದಲ್ಲಿ 13 ಜನ ಗಾಯಗೊಂಡಿದ್ದು,ಚಿಕಿತ್ಸೆ ಪಡೆಯುತ್ತಿದ್ದಾರೆ. ದೇವರ ದಯೆಯಿಂದ ಕೆಲವರು ಡಿಸ್ಚಾರ್ಜ್ ಆಗ್ತಿದ್ದಾರೆ.ಮೂವರಿಗೆ ಎಂಆರ್ಐ, ಸಿಟಿ ಸ್ಕ್ಯಾನ್ ಮಾಡಿದ್ದಾರೆ.

ಒಂದು ಬಸ್ ಸಿಗ್ನಲ್‌ನಲ್ಲಿ ನಿಂತಿತ್ತು.ಈ ವೇಳೆ ಮತ್ತೊಂದು ಬಸ್ ಹಿಂದಿನಿಂದ ಬಂದು ಗುದ್ದಿದೆ. ನಮ್ಮ ಸಿಬ್ಬಂದಿ ಗಾಯಾಳುಗಳನ್ನು ಕರೆತಂದು ಅಡ್ಮಿಟ್ ಮಾಡಿಸಿದ್ದಾರೆ. ಗಾಯಾಳುಗಳ ಚಿಕಿತ್ಸಾ ವೆಚ್ಚ ಸರ್ಕಾರದಿಂದ ಭರಿಸುತ್ತೇವೆ. ಜೊತೆಗೆ ಚಾಲಕ ವೇಗದ ಚಾಲನೆ ಮಾಡಿದ್ರಾ ಅಂತ ಪರಿಶೀಲನೆ ಮಾಡ್ತೇವೆ.ಇವಿ ಬಸ್‌ಗಳ ಅಪಘಾತ ಹೆಚ್ಚಾಗುತ್ತಿವೆ.ಇದರ ಸ್ಥಿತಿಗತಿ ಬಗ್ಗೆ ವರದಿ ತರಿಸಿಕೊಳ್ಳುತ್ತೇವೆ ಎಂದು ತಿಳಿಸಿದರು.

## ಮತದಾರರ ಗಣತಿ ನಮೂನೆ ಪರಿಷ್ಕರಣೆ ಮನೆ-ಮನೆಗೆ ಭೇಟಿ



**ಬೀದರ್, ಜು 04:** ಕರ್ನಾಟಕದಲ್ಲಿ ವಿಶೇಷ ತೀವ್ರ ಪರಿಷ್ಕರಣೆ ಎಸ್ಐಆರ್ ಪ್ರಕ್ರಿಯೆ ಆರಂಭಗೊಂಡಿದ್ದು, ಮತದಾರರ ಗಣತಿ ನಮೂನೆಗಳನ್ನು (ಇಟಿಣಟಜಡಿಚಿಣುಂಟಿ ಈಂಡಿಛ)ವಿತರಿಸುವ ಕಾರ್ಯವನ್ನು ಬಿಎಲ್‌ಒಗಳು ಬಿಎಲ್‌ಒ ಮನೆ-ಮನೆಗೆ ಭೇಟಿ ನೀಡಿ ಪರಿಶೀಲಿಸಲಾಗಿದೆ ಎಂದು ಬೀದರ ಚುನಾವಣೆ ತಹಸೀಲ್ದಾರ ಅವರು ಹೇಳಿದರು.

ವಿವಿಧ ಕಡೆ ಮತದಾರರ ಗಣತಿ ನಮೂನೆ ಅರ್ಜಿ ನೀಡಿ ಮನೆ ಮನೆ ಭೇಟಿ ಕರ್ನಾಟಕದಲ್ಲಿ ವಿಶೇಷ ತೀವ್ರ ಪರಿಷ್ಕರಣೆ ಎಸ್ಐಆರ್ ಪ್ರಕ್ರಿಯೆಯಲ್ಲಿ ಬೀದರ ಜಿಲ್ಲೆಯ 6 ವಿಧಾನಸಭಾ ಕ್ಷೇತ್ರಗಳಲ್ಲಿ ಈ ಕೆಳಂಡ ನಮೂದಿಸಿರುವ ದತ್ತಾಂಶದಂತೆ ಪ್ರಗತಿಯನ್ನು ಸಾಧಿಸಲಾಗಿದೆ.

ಬಸವಕಲ್ಯಾಣ-47 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 52344 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 3427 ಸ್ವೀಕತಗೊಂಡಿದೆ.

ಹುಮನಾಬಾದ-48 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 69272 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 2565 ಸ್ವೀಕತಗೊಂಡಿದೆ.

ಬೀದರ (ದ)-49 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 41142 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 2071 ಸ್ವೀಕತಗೊಂಡಿದೆ.

ಬೀದರ-50 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 63040 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 1904 ಸ್ವೀಕತಗೊಂಡಿದೆ.

ಭಾಲ್ಕಿ-51 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 38259 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 8207 ಸ್ವೀಕತಗೊಂಡಿದೆ.

ಔರಾದ (ಬಿ)-52 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 68817 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 493 ಸ್ವೀಕತಗೊಂಡಿದೆ.

ಜಿಲ್ಲೆಯಲ್ಲಿ 6 ವಿಧಾನಸಭಾಕ್ಷೇತ್ರದಲ್ಲಿ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು ವಿತರಿಸಿರುವ ವಿವರ 332874 ಹಾಗೂ ಒಟ್ಟು ಮತದಾರರ ಗಣತಿ ನಮೂನೆಗಳನ್ನು ಅರ್ಜಿಗಳನ್ನು 19367 ಸ್ವೀಕತಗೊಂಡಿವೆ. ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಯೋಗದಿಂದ ಬದುಕಿಗೆ ಹೊಳಪು : ಹಾರಕೂಡ ಶ್ರೀ



**ಬಸವಕಲ್ಯಾಣ:** ಕ್ರಮಬದ್ಧವಾದ ಮತ್ತು ನಿರಂತರವಾದ ಯೋಗಾಭ್ಯಾಸದಿಂದ ಉತ್ತಮ ಆರೋಗ್ಯದ ಸ್ಥಿರತೆ ಉಂಟಾಗಿ ಬದುಕಿಗೊಂದು ವಿಶೇಷವಾದ ಹೊಳಪು ಬರುತ್ತದೆ ಎಂದು ಹಾರಕೂಡ ಶ್ರೀ ಮಠದ ಪೀಠಾಧಿಪತಿಗಳಾದ ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಆಯೋಜಿಸಿದ 12ನೆಯ ಅಂತರಾಷ್ಟ್ರೀಯ ಯೋಗ ದಿನಾಚರಣೆ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಯೋಗ ಸಮತೋಲನ ಬದುಕಿನ ಸಂಜೀವಿನಿಯಾಗಿದ್ದು ವಿಶ್ವಕ್ಕೆ ಭಾರತ ನೀಡಿದ ಅಮೂಲ್ಯ ಕೊಡುಗೆಯಾಗಿದೆ.

“ಆರೋಗ್ಯಕರ ವಯಸ್ಸಿಗೆ ಯೋಗ” ಎನ್ನುವ ವಿಷಯದೊಂದಿಗೆ ವಿಶ್ವದಲ್ಲೆಡೆ ಯೋಗ ದಿನಾಚರಣೆ ಆಚರಿಸುತ್ತಿರುವುದು ನಿಜವಾಗಿಯೂ ಭಾರತದ ಹೆಮ್ಮೆ.

ಇಂದಿನ ಯುವ ಪೀಳಿಗೆ ಯೋಗವನ್ನು ಬದುಕಿನ ಅಂಗವಾಗಿ ಸ್ವೀಕರಿಸಿ ಅದನ್ನು ಅನುಸರಿಸಿದರೆ ಬಲಾಢ್ಯ ಭಾರತದ ನಿರ್ಮಾಣ ಸಾಧ್ಯ ಎಂದು ನುಡಿದರು.

ಯೋಗ ಗುರು ಡಾ. ಬಸವರಾಜ ಸ್ವಾಮಿ ತ್ರಿಪೂರಾಂತ ಯೋಗಾಸನ ಹೇಳಿಕೊಟ್ಟರು.

ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ ಮಲ್ಲಿನಾಥ ಹಿರೇಮಠಹಾರಕೂಡ, ಬಸವಣ್ಣಪ್ಪ ಗಿಲ್ಕಿ, ಶಿವಕುಮಾರ ಲೆಂಗಟಿ, ಬಾಬು ಮಾನಪಡೆ, ವಿಜಯಕುಮಾರ ಸಂಗೊಳಗಿ, ಪಂಡಿತರಾವ ದೇಗಾಂವ, ಸೂರ್ಯಕಾಂತ ಮಠ, ಅಲ್ಲಮಪ್ರಭು ಹಿರೇಮಠ, ಶಿವಶರಣಯ್ಯ ಕಂಬಳಿಮಠ ಉಪಸ್ಥಿತರಿದ್ದರು.

ಅಂಬರಾಯ ಉಗಾಜಿ ಸ್ವಾಗತಿಸಿ, ನಿರೂಪಣೆ ಮಾಡಿದರು.

ಕಾರ್ತಿಕ ಸ್ವಾಮಿ ಯಲದಗುಂಡಿ, ಶರಣಪ್ಪ ಜಮಾದಾರ ಪ್ರಾರ್ಥನೆ ಗೀತೆ ನಡೆಸಿಕೊಟ್ಟರು.

ಶ್ರೀ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆ ಮಕ್ಕಳು ಮತ್ತು ಶ್ರೀಮಠದ ಭಕ್ತರು ಯೋಗಾಭ್ಯಾಸ ಮಾಡಿದರು.

# ರೌಡಿಶೀಟರ್‌ಗಳ ಮನೆಗಳಿಗೆ ಪೊಲೀಸ್ ಭೇಟಿ: ಶಾಂತಿ ಕಾಪಾಡುವಂತೆ ಕಟ್ಟುನಿಟ್ಟಿನ ಎಚ್ಚರಿಕೆ



**ಜೇವರ್ಗಿ:** ಬಾಪುಗೌಡ ಪಾಟೀಲ ವೃತ್ತ ನಿರೀಕ್ಷಕರು ( ಸಿಪಿಐ ) ಅವರ ನೇತೃತ್ವದಲ್ಲಿ ರೌಡಿ ನಿಗ್ರಹ ಪಡೆ ಹಾಗೂ ಜೇವರ್ಗಿ ಪೊಲೀಸ್ ಠಾಣೆಯ ಸಿಬ್ಬಂದಿಗಳು ಜೇವರ್ಗಿ ಪಟ್ಟಣದಲ್ಲಿನ ರೌಡಿಶೀಟರ್‌ಗಳ ಮನೆಗಳಿಗೆ ಇಂದು ಮುಂಜಾನೆ ಭೇಟಿ ನೀಡಿ ವಿಶೇಷ ಪರಿಶೀಲನಾ ಕಾರ್ಯಾಚರಣೆ ನಡೆಸಿದರು.

ಕಾರ್ಯಾಚರಣೆಯ ವೇಳೆ ರೌಡಿಶೀಟರ್‌ಗಳು ಬಳಸುತ್ತಿರುವ ವಾಹನಗಳ ದಾಖಲಾತಿ, ಅವುಗಳ ಕಾನೂನುಬದ್ಧ ಬಳಕೆ ಹಾಗೂ ಚಟುವಟಿಕೆಗಳನ್ನು ಪರಿಶೀಲಿಸಲಾಯಿತು. ಸಾರ್ವಜನಿಕರಲ್ಲಿ ಭಯದ ವಾತಾವರಣ ಉಂಟುಮಾಡುವಂತಹ ಯಾವುದೇ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬಾರದು ಎಂದು ಪೊಲೀಸರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಇದೇ ವೇಳೆ ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಯಾವುದೇ ರೀತಿಯ ಬೆದರಿಕೆ, ಹಲ್ಲೆ, ದಬ್ಬಾಳಿಕೆ, ಅಕ್ರಮ ವಸೂಲಿ ಅಥವಾ ಇತರೆ ಅಪರಾಧಿಕ ಕೃತ್ಯಗಳಲ್ಲಿ ತೊಡಗಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜೇವರ್ಗಿ ತಾಲೂಕಿನಾದ್ಯಂತ ಅಪರಾಧ ನಿಯಂತ್ರಣ ಹಾಗೂ ಸಾರ್ವಜನಿಕರಲ್ಲಿ ಸುರಕ್ಷತಾ ಭಾವನೆ ಮೂಡಿಸುವ ಉದ್ದೇಶದಿಂದ ಇಂತಹ ತಪಾಸಣೆ ಮತ್ತು ನಿಗಾ ಕಾರ್ಯಾಚರಣೆಗಳು ಮುಂದುವರೆಯಲಿವೆ ಎಂದು ಪೊಲೀಸ್ ಇಲಾಖೆ ತಿಳಿಸಿದೆ. ಇತ್ತೀಚಿನ ಅವಧಿಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲೂ ರೌಡಿಶೀಟರ್‌ಗಳ ಮೇಲಿನ ನಿಗಾವನ್ನು ಹೆಚ್ಚಿಸುವ ಕಾರ್ಯಾಚರಣೆಗಳನ್ನು ಪೊಲೀಸರು ಕೈಗೊಂಡಿದ್ದಾರೆ.

# ಹುಲ್ಯಾಳದಲ್ಲಿ ವೇದಾಂತಕೇಸರಿ ಮಲ್ಲಿಕಾರ್ಜುನ ಶಿವಯೋಗಿಗಳ ಮಂದಿರದ ಗರ್ಭಗುಡಿ ಶಿಲಾಪೂಜೆ

**ಜಮಖಂಡಿ, ಜು 4:** ತಾಲೂಕಿನ ಹುಲ್ಯಾಳ ಗ್ರಾಮದ ಶ್ರೀಗುರುದೇವಾಶ್ರಮದ ಆವರಣದಲ್ಲಿ ನಿರ್ಮಾಣಗೊಳ್ಳುತ್ತಿರುವ ವೇದಾಂತಕೇಸರಿ ಮಲ್ಲಿಕಾರ್ಜುನ ಶಿವಯೋಗಿಗಳ ಮಂದಿರದ ಗರ್ಭಗುಡಿ ನಿರ್ಮಾಣಕ್ಕೆ ಶುಕ್ರವಾರ ಶಿಲಾಪೂಜೆ ನೆರವೇರಿಸಲಾಯಿತು.

ಮುಧೋಳ ತಾಲೂಕಿನ ಶಿರೋಳ ಗ್ರಾಮದ ರಾಮಾರೂಢ ಮಠದ ಶಂಕರಾರೂಢ ಮಹಾಸ್ವಾಮಿಗಳು ಶಾಸ್ತ್ರೋಕ್ತವಾಗಿ ಶಿಲಾಪೂಜೆಯನ್ನು ನೆರವೇರಿಸಿದರು. ಶ್ರೀಗುರುದೇವಾಶ್ರಮದ ಹರ್ಷಾನಂದ ಮಹಾಸ್ವಾಮಿಗಳು ಕಾರ್ಯಕ್ರಮದ ನೇತೃತ್ವ ವಹಿಸಿದ್ದರೆ, ಋಷಿಕೇಶದ ಗಂಗಾಧರ ಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು.

ವಿಜಯಪುರ ಜ್ಞಾನ ಯೋಗಾಶ್ರಮದ ಸಿದ್ಧೇಶ್ವರ ಮಹಾಸ್ವಾಮಿಗಳ ಸಂಕಲ್ಪದಂತೆ, ಅವರ ಗುರುಗಳಾದ ವೇದಾಂತಕೇಸರಿ ಮಲ್ಲಿಕಾರ್ಜುನ ಶಿವಯೋಗಿಗಳ ಸ್ಮರಣಾರ್ಥ ಮಂದಿರ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಇದೀಗ ಗರ್ಭಗುಡಿ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ.

ಈ ಸಂದರ್ಭದಲ್ಲಿ ಮಂದಿರ ನಿರ್ಮಾಣ ಕಾಮಗಾರಿಯಲ್ಲಿ ತೊಡಗಿರುವ ಕಾರ್ಮಿಕರಿಗೆ ವಸ್ತ್ರದಾನ ಮಾಡಲಾಯಿತು. ಹಿರಿಯ ಸಾಹಿತಿ ಪ್ರೊ. ಬಸವರಾಜ ಕಡ್ಡಿ, ಪ್ರಾಚಾರ್ಯ ಡಾ. ಟಿ.ಪಿ. ಗಿರಡ್ಡಿ, ಲೋಕನಾಥ ತೋಳಮಟ್ಟಿ, ಯಲ್ಲಪ್ಪ ಶಿವಾಪುರ, ಸಿದರಾಯ ಅಳ್ಳಿಮಟ್ಟಿ, ಶ್ರೀಶೈಲ ಸುಣಗದ, ರುದ್ರಪ್ಪ ಮರೇಗುದ್ದಿ, ಮಲ್ಲಪ್ಪ ಕೋರಿ, ಗಣಪತಿ



ಗಲಗಲಿ, ಉಮೇಶ ಕೋರಿ, ನಿಂಗಪ್ಪ ಹುಣಸಿಕಟ್ಟಿ, ರಾಜು ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೆಳೆ ವಿಮೆ ಹಣ ಬಿಡುಗಡೆಗೆ ಆಗ್ರಹಿಸಿ ರೈತರ ಪ್ರತಿಭಟನೆ

**ಕಲಬುರಗಿ :** ಕಳೆದ ವರ್ಷದ ಬೆಳೆ ವಿಮೆ ಪರಿಹಾರದ ಹಣ ಇನ್ನೂ ರೈತರ ಖಾತೆಗೆ ಜಮಾ ಆಗದಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಸೇಡಂ ತಾಲೂಕು ಘಟಕದ ವತಿಯಿಂದ ಸೇಡಂನ ಚಿಂಚೋಳಿ ಕ್ರಾಸ್ ಸಮೀಪ ಗುರುವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಭಾಗವಹಿಸಿದ ರೈತರು, ಕಳೆದ ವರ್ಷದ ಬೆಳೆ ನಷ್ಟದಿಂದ ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರ ಹಾಗೂ ಸಂಬಂಧಿತ ಅಧಿಕಾರಿಗಳು ತಕ್ಷಣವೇ ಬೆಳೆ ವಿಮೆ ಪರಿಹಾರದ ಹಣವನ್ನು ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಬೆಳೆ ವಿಮೆ ಯೋಜನೆಯಡಿ ಅರ್ಹ ರೈತರಿಗೆ ಪರಿಹಾರ ಧನ ಪಾವತಿಯಾಗದೆ ಇರುವುದರಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಈ ಸಮಸ್ಯೆಯನ್ನು ಕೂಡಲೇ ಪರಿಹರಿಸಬೇಕು ಎಂದು ಸೇಡಂ ತಾಲೂಕು ರೈತ ಸಂಘದ ಅಧ್ಯಕ್ಷ ಶಾಂತಕುಮಾರ ಚನ್ನಕ್ಕಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಜಿ.ಕೆ. ಪಾಟೀಲ್ (ತೆಲ್ಕೂರ್), ಆಮಶೆಟ್ಟಿ ಪಾಟೀಲ್ (ಹೆಡ್ಡಳ್ಳಿ), ರವಿ ಪಾಟೀಲ್ (ಸೂರವಾರ), ದೊಡ್ಡಪ್ಪಗೌಡ ಯಡಗಾ, ಭೀಮರಾವ್ ಮಾಲಿಪಾಟೀಲ್ (ಮಳಖೇಡ), ಚಂದ್ರಕಾಂತ ಕಲ್ಕಮ್, ಚಂದ್ರಕಾಂತ ತೊಟ್ನಳ್ಳಿ, ಚಂದ್ರಕಾಂತ ಗುತ್ತೇದಾರ್, ಭಾರತೀಶ್ ಕುಲಕರ್ಣಿ, ನರಸಿಂಹಲು ನಕ್ಕಾ ಸೇರಿದಂತೆ ಅನೇಕ ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.


ರೈತರ ನ್ಯಾಯಯುತ ಬೇಡಿಕೆಗಳಿಗೆ ಶೀಘ್ರ ಸ್ಪಂದಿಸಿ ಬಾಕಿ ಇರುವ ಬೆಳೆ ವಿಮೆ



ಹಣವನ್ನು ಬಿಡುಗಡೆ ಮಾಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

# ಸದಾಚಾರವೇ ಪರಮಶಾಂತಿಯ ಮಾರ್ಗ: ಸಂಗಮೇಶ್ವರ ಶ್ರೀ

**ವಿಜಯಪುರ, ಜು. 4:** ಮನುಷ್ಯನ ಜೀವನದಲ್ಲಿ ಪರಮಶಾಂತಿ, ಸುಖ ಮತ್ತು ನೆಮ್ಮದಿ ನೆಲೆಸಬೇಕಾದರೆ ಸದಾಚಾರವನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ಸಾಲೋಟಗಿಯ ಶ್ರೀ ಸಿದ್ದೇಶ್ವರ ಸ್ವಾಮೀಜಿ ಆಶ್ರಮದ ಪೂಜ್ಯ ಸಂಗಮೇಶ್ವರ ಶ್ರೀಗಳು ಹೇಳಿದರು.



ಬೊಳೆಗಾಂವದ ನೂತನ ವೀರಭದ್ರೇಶ್ವರ ದೇವಸ್ಥಾನದಲ್ಲಿ ನಡೆದ ಸತ್ಸಂಗದಲ್ಲಿ ಅವರು ಮಾತನಾಡಿ, “ಸದಾಚಾರ ಎಂದರೆ ಪರಿಶುದ್ಧವಾದ ಬದುಕು. ಆಚಾರವೆಂದರೆ ಕ್ರಿಯೆ. ಭಕ್ತಿಯ ಮಾರ್ಗದಲ್ಲಿ ಸಾಗುವ ಸದ್ಭಕ್ತನು ತನ್ನ ತನು, ಮನ ಮತ್ತು ಭಾವವನ್ನು ಪವಿತ್ರಗೊಳಿಸಿಕೊಂಡು ಸದಾಕಾಲ ಭಗವಂತನ ಸ್ಮರಣೆಯಲ್ಲಿ ಬದುಕುವುದೇ ನಿಜವಾದ ಸದಾಚಾರ” ಎಂದು ತಿಳಿಸಿದರು.

ಸದಾಚಾರದಿಂದಲೇ ಬದುಕಿನಲ್ಲಿ ಸುಖ, ಶಾಂತಿ ಮತ್ತು ನೆಮ್ಮದಿ ನೆಲೆಸುತ್ತದೆ. ಸದಾಚಾರವಿಲ್ಲದ ಜೀವನ ದುಃಖ, ಅಶಾಂತಿ ಹಾಗೂ ಸಂಕಷ್ಟಗಳಿಗೆ ಕಾರಣವಾಗುತ್ತದೆ ಎಂದು ಅವರು ಹೇಳಿದರು.

ಮನುಷ್ಯನು ಈ ಜಗತ್ತಿಗೆ ಬಂದಿರುವುದು ಪರಮಶಾಂತಿಯನ್ನು ಅನುಭವಿಸುವುದಕ್ಕಾಗಿ. ಅದನ್ನೇ ಜೀವನದ ಧ್ಯೇಯ ಮತ್ತು ಉದ್ದೇಶವನ್ನಾಗಿಸಿಕೊಳ್ಳಬೇಕು. ಕ್ಷಣಿಕ ಸುಖ ನೀಡುವ ಹಣ, ಆಸ್ತಿ, ಮನೆ, ಹೊಲ, ವಸ್ತು ಹಾಗೂ ಬಂಗಾರ ಗಳಿಕೆಯಲ್ಲಿ ಮಾತ್ರ ಜೀವನ ಸಾರ್ಥಕವಾಗುವುದಿಲ್ಲ ಎಂದು ಅವರು ಅಭಿಪ್ರಾಯಪಟ್ಟರು.

ಬಾಹ್ಯ ಸಿರಿ-ಸಂಪತ್ತು ಬಂಧನ ಮತ್ತು ದುಃಖಕ್ಕೆ ಕಾರಣವಾಗಬಹುದು. ಆದರೆ ಸದಾಚಾರ, ಸದ್ಗುಣ ಮತ್ತು ಭಗವಂತನ ಸ್ಮರಣೆ ಪರಮಶಾಂತಿಗೆ ದಾರಿ ಮಾಡಿಕೊಡುತ್ತವೆ. ಇದೇ ಕಾರಣಕ್ಕೆ ಸಂತರು ಮತ್ತು ಶರಣರು ಸದಾಚಾರಕ್ಕೆ ಅತ್ಯಂತ ಮಹತ್ವ ನೀಡಿದ್ದಾರೆ ಎಂದು ಹೇಳಿದರು.

ಅನಾಚಾರದ ಬದುಕು ಅಶಾಂತಿಯನ್ನು ಉಂಟುಮಾಡಿದರೆ, ಸದಾಚಾರದ ಬದುಕು ಪರಮಶಾಂತಿಯನ್ನು ನೀಡುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ಸದಾಚಾರದ ಮಾರ್ಗದಲ್ಲಿ ನಡೆದು ಜೀವನವನ್ನು ಸಾರ್ಥಕಗೊಳಿಸಬೇಕು ಎಂದು ಸಂಗಮೇಶ್ವರ ಶ್ರೀಗಳು ಕರೆ ನೀಡಿದರು.

# ಬಳ್ಳಾರಿ ಬಿಸಿಕಡಿಮೆಯಾಗಲು ಗಿಡ ಮರ ಬೆಳಸಿ: ಸುಮನ್ ಪನ್ನೇಕರ್

**ಬಳ್ಳಾರಿ, ಜು.04:** ಮಳೆಗಾಲ ಆರಂಭವಾಗುತ್ತಿರುವುದರಿಂದ ಬಿಸಿಲ ನಾಡು ಬಳ್ಳಾರಿಯಲ್ಲಿ ಅರಣ್ಯ ಇಲಾಖೆಯಿಂದ ಗಿಡ ನೆಡುವ ವನಮಹೋತ್ಸವ ಹಮ್ಮಿಕೊಂಡಿದೆ. ಇದರಂಗವಾಗಿ ಇಂದು ಜನರಲ್ಲಿ ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ಶಾಲಾ ಕಾಲೇಜು ವಿದ್ಯಾರ್ಥಿಗಳು ಸಶಿಗಳನ್ನು, ಪರಿಸರ ಸಂರಕ್ಷಣೆಯ ಫಲಕಗಳನ್ನು ಹಿಡಿದು ಹಸಿರು ಜಾಥಾ(ಗ್ರೀನ್ ಮಾರ್ಚ್) ನಡೆಸಿದರು.



ಜಾಥಾ ಕೌಲ್ ಬಜಾರ್ ಮೂಲಕ ಟಿಬಿ.ಸ್ಯಾನಿಟೋರಿಯಂ ಆಸ್ಪತ್ರೆವರೆಗೆ ಸಾಗಿತು.ನಂತರ ಬಳ್ಳಾರಿ ವೈದ್ಯಕೀಯ ಕಾಲೇಜಿನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿ 250 ಗಿಡ ನೆಟ್ಟು ನೀರೆರೆದರು. ಅಲ್ಲದೆ ತಮ್ಮ ತಮ್ಮ ಮನೆ ಮುಂದೆ ನೆಡಲು ಸಸಿಗಳನ್ನು ತೆಗೆದುಕೊಂಡು ಹೋದರು.ಜಾಥಾಗೆ ಅರಣ್ಯ ಇಲಾಖೆ ಕಚೇರಿ ಬಳಿ ಎಸ್ಪಿ ಡಾ. ಸುಮನ್ ಡಿ.ಪೆನ್ನೇಕರ್ ಚಾಲನೆ ನೀಡಿ .ಬಳ್ಳಾರಿಯಲ್ಲಿ ಬೇಸಿಗೆಯಲ್ಲಿ ಅತಿ ಉಷ್ಣತೆಯನ್ನು ಅನುಭವಿಸುತ್ತೇವೆ. ಅದಕ್ಕಾಗಿ ಇದು ಕಡಿಮೆಯಾಗಲು ಗಿಡ, ಮರಗಳನ್ನು ಬೆಳೆಸುವುದು ಎಲ್ಲರ ಜವಾಬ್ದಾರಿ ಆಗಬೇಕು. ಸಿಸಿಗಳನ್ನು ನೆಟ್ಟು ಮಕ್ಕಳು ನಿಮ್ಮಬೆಳವಣಿಗೆ ಜೊತೆಗೆ ನೀವು ನೆಟ್ಟ ಗಿಡದ ಬೆಳವಣಿಗೆಯನ್ನೂ ಕಾಣಬೇಕು ಅದು ಖುಷಿ ತರುತ್ತೆ ಎಂದರು.

ಜಿಲ್ಲಾ ಪಂಚಾಯ್ತಿ ಸಿಇಓ ಮಹಮ್ಮದ್ ಹ್ಯಾರೀಸ್ ಸುಮೇರ್ ಮಾತನಾಡಿ, ಸುಸ್ಥಿರ ಅಭಿವೃದ್ಧಿಯ ದಾರಿಯಲ್ಲಿ ನಾವೆಲ್ಲ ಸಾಗಬೇಕು ಅದಕ್ಕೆ ಉತ್ತಮಪರಿಸರ ಬೇಕು. ಉತ್ತಮ ಪರಿಸರ ಇದ್ದರೆ ಮಾತ್ರ ನಾವೂ ಉತ್ತಮವಾಗಿರಲು ಸಾಧ್ಯ, ಹಾಗಾಗಿ ಅರಣ್ಯೀಕರಣಕ್ಕೆ ಒತ್ತು ನೀಡಬೇಕು ದೇಶದ ಭವಿಷ್ಯಕ್ಕಾಗಿ. ಇಂದಿನಪರಿಸರ ಸಂರಕ್ಷಣೆ ಕಾರ್ಯಕ್ರಮದ ಜೊತೆಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅಂದರೆ ಎಸ್ ಐ ಆರ್ ಬಗ್ಗೆ ಮಕ್ಕಳು ಪೋಷಕರಲ್ಲಿ ಜಾಗೃತಿಮೂಡಿಸುವ ಉದ್ದೇಶವನ್ನು ಸಹ ಹೊಂದಿದೆ. ಮತದಾನದ ಹಕ್ಕು ಇರುವವರೆಲ್ಲ ತಪ್ಪದೆ ಎನ್ಯುಮರೇಷನ್ ಪಾರಂ ತುಂಬಿ ಬಿಎಲ್ ಓ ಗಳಿಗೆ ನೀಡುವಂತೆ ಮಕ್ಕಳು ಪೋಷಕರಿಗೆ ಹೇಳಬೇಕು ಎಂದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್.ಬಸವರಾಜ್ ಮಾತನಾಡಿ, ಭೂಮಿ, ಪ್ರಕೃತಿ ಎಂಬುದು ನಮಗೆ ಪೂರ್ವಜರಿಂದ ಪಡೆದುದಲ್ಲ. ಇದು ಮುಂದಿನಪೀಳಿಗೆಗಾಗಿ ಪಡೆದ ಸಾಲ, ಅದಕ್ಕಾಗಿ

ನಾವಿಂದು ಅನುಭವಿಸುತ್ತಿರುವ ಪ್ರಕೃತಿಯನ್ನು ಮುಂದಿನ ಜನತೆಗೆ ಇನ್ನೂ ಉತ್ತಮವಾಗಿಸಿ ಹಸ್ತಾಂತರಿಸುವ ಜವಾಬ್ದಾರಿ ಎಲ್ಲರ ಮೇಲಿದೆಂದರು.ಜಿಪಂ ಕಾರ್ಯದರ್ಶಿ ಶಸಿಕಾಂತ್ ಶಿವಪುರೆ, ಇದ್ದರು ಆರ್ ಎಫ್ ಓ ಗಿರೀಶ್ ಕಾರ್ಯಕ್ರಮ ನಿರ್ವಹಿಸಿದರು.

ಇದೇ ವೇಳೆ ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಬಗ್ಗೆ ಶಾಲಾ ಮಕ್ಕಳ ಮೂಲಕಪೋಷಕರಿಗೆ ತಿಳಿಸಲು ಜಾಗೃತಿ ಮೂಡಿಸಲಾಯ್ತು.

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಕಡ್ಡಾಯವಾಗಿ ಭಾಗವಹಿಸಿ ಮತದಾರರ ವಿವರ ದೃಢೀಕರಿಸಿ : ಶಾಸಕ ಲಕ್ಷ್ಮಣ ಸವದಿ



**ಅಥಣಿ :** ಭಾರತ ಚುನಾವಣಾ ಆಯೋಗ ಹಮ್ಮಿಕೊಂಡಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಅಭಿಯಾನದಲ್ಲಿ ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ಭಾಗವಹಿಸಿ, ಮನೆಗೆ ಬರುವ ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಅಗತ್ಯ ದಾಖಲೆಗಳನ್ನು ನೀಡಿ ಸಹಕರಿಸಬೇಕು ಎಂದು ಶಾಸಕ ಲಕ್ಷ್ಮಣ ಸವದಿ ಮನವಿ ಮಾಡಿದರು.

ಅವರು ತಮ್ಮ ನಿವಾಸದಲ್ಲಿ ಮಾತನಾಡಿ, ಚುನಾವಣಾ ಆಯೋಗವು ಕರ್ನಾಟಕದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮವನ್ನು ಜೂನ್ 30ರಿಂದ ಜುಲೈ 29ರವರೆಗೆ ಹಮ್ಮಿಕೊಂಡಿದೆ. ಈ ಅವಧಿಯಲ್ಲಿ ಅಧಿಕಾರಿಗಳು ಹಾಗೂ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಅಗತ್ಯ ನಮೂನೆಗಳನ್ನು (ಫಾರ್ಮ್) ವಿತರಿಸಲಿದ್ದಾರೆ. ಮತದಾರರು ಅವುಗಳನ್ನು ಸರಿಯಾಗಿ ಭರ್ತಿ ಮಾಡಿ ಸಂಬಂಧಿತ ಅಧಿಕಾರಿಗಳಿಗೆ ಸಲ್ಲಿಸಬೇಕು ಎಂದು ತಿಳಿಸಿದರು.

ಯಾರಾದರೂ ಈ ಪ್ರಕ್ರಿಯೆಯಲ್ಲಿ ಭಾಗವಹಿಸದೇ ನಿರ್ಲಕ್ಷ್ಯ ವಹಿಸಿದರೆ, ಅವರ ಹೆಸರು ಮತದಾರರ ಪಟ್ಟಿಯಿಂದ ಕೈಬಿಡುವ ಸಾಧ್ಯತೆ ಇದೆ. ಇದರಿಂದ ಮುಂದಿನ ಚುನಾವಣೆಯಲ್ಲಿ ಮತದಾನದ ಹಕ್ಕು ಕಳೆದುಕೊಳ್ಳುವ ಪರಿಸ್ಥಿತಿ ಉಂಟಾಗಬಹುದು. ಆದ್ದರಿಂದ ಯಾವುದೇ ನಿರ್ಲಕ್ಷ್ಯ ತೋರದೆ ಎಲ್ಲರೂ ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ಮತದಾನದ ಹಕ್ಕು ಪ್ರತಿಯೊಬ್ಬ ಭಾರತೀಯ ನಾಗರಿಕನ ಅಮೂಲ್ಯ ಹಕ್ಕಾಗಿದ್ದು, ಅದನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಆದ್ದರಿಂದ ಜುಲೈ 29ರೊಳಗೆ ಅಗತ್ಯ ನಮೂನೆಗಳನ್ನು ಭರ್ತಿ ಮಾಡಿ ಸಲ್ಲಿಸುವ ಮೂಲಕ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಖಚಿತಪಡಿಸಿಕೊಳ್ಳಬೇಕು. ಮನೆಗೆ ಭೇಟಿ ನೀಡುವ ಬಿಎಲ್‌ಒಗಳಿಗೆ ಸಂಪೂರ್ಣ ಸಹಕಾರ ನೀಡುವಂತೆ ಶಾಸಕ ಲಕ್ಷ್ಮಣ ಸವದಿ ಸಾರ್ವಜನಿಕರಲ್ಲಿ ಮನವಿ ಮಾಡಿದರು..

# ಕರ್ನಾಟಕದ ಕಬೀರ ಸಂತ ಶಿಶುನಾಳ ಶರೀಫ



**ಕಲಬುರಗಿ :** ಹಿಂದೂ ಮತ್ತು ಇಸ್ಲಾಂ ಧರ್ಮಗಳ ನಡುವೆ ಸಮನ್ವಯತೆ ತರಲು ಶ್ರಮಿಸಿದ, ಎಲ್ಲರನ್ನು ಸಮದೃಷ್ಟಿಯಿಂದ ನೋಡಿದ ತತ್ವಜ್ಞಾನಿ ಸಂತ ಶಿಶುನಾಳ ಶರೀಫ ಅವರು 'ಕರ್ನಾಟಕದ ಕಬೀರ್'ರಾಗಿದ್ದಾರೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು.

ನಗರದ ಆಳಂದ ರಸ್ತೆಯ ಜೆ.ಆರ್. ನಗರದಲ್ಲಿನ 'ಸಕ್ಸಸ್ ಕಂಪ್ಯೂಟರ್ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಸಂತ ಶಿಶುನಾಳ ಶರೀಫ್‌ರ ಸ್ಮರಣೋತ್ಸವ' ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಶರೀಫ್ ಅವರು 'ಸಮಾನತೆಯ ಹರಿಕಾರ. ವಿಚಾರವಾದಿಗಳು, ವಿಮರ್ಶಕರು, ಸಮಾಜ ಸುಧಾರಕರು, ನೀತಿ ಬೋಧಕರು ಹಾಗೂ ಮೇರು ಜ್ಞಾನಿಗಳಾಗಿದ್ದರು. ಪರಿಸ್ಥಿತಿಗೆ ಅನುಗುಣವಾಗಿ ಕವಿತೆಗಳನ್ನು ರಚಿಸಿ ಸಂದೇಶವನ್ನು ಹರಡಲು ಶರೀಫ್ ಹಾಡುತ್ತಿದ್ದರು. ಅವರು ತಮ್ಮ ಸಂಯೋಜನೆಗಳನ್ನು ಎಂದಿಗೂ ಬರೆದಿಲ್ಲದಿದ್ದರೂ, ಅವುಗಳಲ್ಲಿ ಹಲವು ಬಾಯಿ ಮಾತಿನ ಮೂಲಕ ಭವಿಷ್ಯದ ಪೀಳಿಗೆಗೆ ರವಾನಿಸಲ್ಪಟ್ಟಿವೆ ಎಂದರು.

ಸಂತ ಶಿಶುನಾಳ ಶರೀಫ ಅವರು "ಸೋರುಟಿಹುದು ಮನೆಯ ಮಾಳಿಗಿ", "ಗುಡಿಯಾ ನೋಡಿರಣ್ಣ ದೇಹದ", "ಅಳಬೇಡ ತಂಗಿ ಅಳಬೇಡ", "ತರವಲ್ಲ ತಗಿ ನಿನ್ನ",""ಬಿದ್ದಿಯಬ್ಬೆ ಮುದುಕಿ", "ಎಲ್ಲಾರಂಥವನಲ್ಲ ನನ್ನ ಗಂಡ", "ಮೋಹದ ಹೆಂಡತಿ ತೀರಿದ ಬಾಲಿಕಾ", "ಸ್ನೇಹಾ ಮಾಡಬೇಕಿಂಥವಾಲ", "ಗುಡುಗುಡಿಯ ಸೇದು ನೋಡೋ", "ಲೋಕದ ಕಲಾಜಿ","ದುಡ್ಡು ಕೆಟ್ಟದು ನೋಡಣ್ಣ", "ಕೆಲ ಜಾನ ಶಿವ ಧ್ಯಾನ ಮದನ್ನಾ" ಅಂತಹ ಪ್ರಸಿದ್ಧವಾದ ಅನೇಕ ತತ್ವಪದಗಳನ್ನು ಹಾಡುತ್ತಾ, ಎಲ್ಲೆಡೆ ಜನಜಾಗೃತಿಯನ್ನು ಮೂಡಿಸಿದರು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷ ಅಸ್ಲಾಂ ಶೇಖ್, ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್. ಬಿರಾದಾರ, ಶಿಕ್ಷಕಿಯರಾದ ಪೂಜಾ ಹೂಗಾರ, ಕಾವೇರಿ ಹೌದೆ, ಮುಸ್ಕಾನ್ ಶೇಖ್ ಹಾಗೂ ವಿದ್ಯಾರ್ಥಿಗಳು ಇದ್ದರು.

# ಚಡಚಣದಲ್ಲಿ ಭೀಕರ ರಸ್ತೆ ಅಪಘಾತ: ಓರ್ವ ಸ್ಥಳದಲ್ಲಿ ಸಾವು

**ಚಡಚಣ, ಜು. 4:** ಜಿಲ್ಲೆಯ ಚಡಚಣ ತಾಲೂಕಿನ ಸೂರ್ಯ ಲಾಡ್ಜ್ ಸಮೀಪ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಓರ್ವ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟಿದ್ದು, ಮಹಿಳೆಯೊಬ್ಬರು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

ಲಭ್ಯವಾದ ಮಾಹಿತಿಯ ಪ್ರಕಾರ, ಸೂರ್ಯ ಲಾಡ್ಜ್ ಸಮೀಪ ಟಿಪ್ಪರ್ ಹಾಗೂ ದ್ವಿಚಕ್ರ ವಾಹನದ ನಡುವೆ ಸಂಭವಿಸಿದ ಭೀಕರ ಡಿಕ್ಕಿಯಿಂದ ಈ ದುರ್ಘಟನೆ ನಡೆದಿದೆ. ದ್ವಿಚಕ್ರ ವಾಹನವು ಟಿಪ್ಪರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಅಪಘಾತ ಸಂಭವಿಸಿದೆ ಎಂದು ಹೇಳಲಾಗಿದೆ.ಅಪಘಾತದಲ್ಲಿ ಧುಮುಕನಾಳ ಗ್ರಾಮದ ನಿವಾಸಿಯಾದ 55 ವರ್ಷದ ದಿಲೀಪ್ ಪಾಟೀಲ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅವರೊಂದಿಗೆ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುತ್ತಿದ್ದ ಪತ್ನಿ 50 ವರ್ಷದ ಲಲಿತಾಬಾಯಿ ಪಾಟೀಲ ಅವರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ತಕ್ಷಣ ಚಿಕಿತ್ಸೆಗಾಗಿ ವಿಜಯಪುರದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ಚಡಚಣ ಪೊಲೀಸ್ ಠಾಣೆಯ ಪಿಎಸ್‌ಐ ಸೋಮೇಶ ಗೇಜ್ಜಿ ಅವರು ತಮ್ಮ ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ಭೇಟಿ ನೀಡಿ, ಮಹಜರು ನಡೆಸಿ ಪರಿಶೀಲನೆ ಆರಂಭಿಸಿದ್ದಾರೆ.ಈ ಸಂಬಂಧ ಚಡಚಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅಪಘಾತಕ್ಕೆ ನಿಖರ ಕಾರಣವೇನು ಎಂಬ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಅಪಘಾತದಲ್ಲಿ ಭಾಗಿಯಾಗಿದ್ದ ಟಿಪ್ಪರ್ ವಾಹನದ ನೋಂದಣಿ ಸಂಖ್ಯೆ MH-09-CA-0822 ಎಂದು ತಿಳಿದುಬಂದಿದೆ. ಪ್ರಸ್ತುತ ಪೊಲೀಸರು ಪ್ರಕರಣದ ಎಲ್ಲ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದು, ಮುಂದಿನ ಕಾನೂನು ಕ್ರಮ ಜಾರಿಯಲ್ಲಿದೆ.

# ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಇಂಜಿನಿಯರ್‌ಗಳ ಪಾತ್ರ ಅತ್ಯಂತ ಮಹತ್ವದ್ದು:ನಲಿನ್ ಅತುಲ್



**ಕಲಬುರಗಿ,ಜು.04–** ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಯ ನಿಟ್ಟಿನಲ್ಲಿ ರಾಜ್ಯ ಸರ್ಕಾರ ವಿಶೇಷ ಆಸಕ್ತಿ ವಹಿಸಿದ್ದು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆ.ಕೆ.ಆರ.ಡಿ.ಬಿ) ಮೂಲಕ ಕೈಗೊಂಡಿರುವ ಕಾಮಗಾರಿಗಳ ಅನುಷ್ಠಾನದಲ್ಲಿ ಇಂಜಿನಿಯರ್‌ಗಳ ಪಾತ್ರ ಅತ್ಯಂತ ನಿರ್ಣಾಯಕವಾಗಿದೆ ಎಂದು ಕೆ.ಕೆ.ಆರ್.ಡಿ.ಬಿ. ಕಾರ್ಯದರ್ಶಿಗಳಾದ ನಲಿನ್ ಅತುಲ್ ಅವರು ಹೇಳಿದರು.

ಶುಕ್ರವಾರ, ನಗರದ ನಾಗನಹಳ್ಳಿ ಕ್ರಾಸ್ ಹತ್ತಿರದಲ್ಲಿರುವ ಜೆಸ್ಟ್ ಹೋಟೆಲ್(ಉಪ್ಪಿನ ವೆಂಚರ್ಸ್ ಘಟಕ )ದಲ್ಲಿ ಆಯೋಜಿಸಿದ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ ಹಾಗೂ ಲೋಕೋಪಯೋಗಿ ಇಲಾಖೆ ಈಶಾನ್ಯ ವಲಯ ಕಲಬುರಗಿ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಲ್ಯಾಣ ಕರ್ನಾಟಕ ಪ್ರದೇಶದ ಎಲ್ಲಸ್ತರದ ಅಭಿಯಂತರಿಗಾಗಿ ಬೀದರ, ಯಾದಗಿರಿ, ಕಲಬುರಗಿ ಎರಡು ದಿನಗಳ ಸಮಗ್ರ ತಾಂತ್ರಿಕ ತರಬೇತಿ ಕಾರ್ಯಗಾರ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕಲ್ಯಾಣ ಕರ್ನಾಟಕ ಭಾಗವು ಅಭಿವೃದ್ಧಿಯಲ್ಲಿ ರಾಜ್ಯದ ಇತರ ವಿಭಾಗಗಳಿಗಿಂತ ಹಿಂದೆ ಉಳಿದಿರುವ ಹಿನ್ನೆಲೆಯಲ್ಲಿ, ಈ ಭಾಗಕ್ಕೆ ವಿಶೇಷ ಒತ್ತು ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಇಂಜಿನಿಯರ್‌ಗಳು ಬದ್ಧತೆಯಿಂದ ಕಾರ್ಯನಿರ್ವಹಿಸುವ ಅವಶ್ಯಕತೆ ಇದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದ ಕುರಿತು ಮಾತನಾಡುತ್ತಾ, ನಮ್ಮ ಇಂಜಿನಿಯರ್ ಬಂಧುಗಳು ಕೈಗೊಳ್ಳುವ ಯಾವುದೇ ಕೆಲಸಗಳು ಅಥವಾ ಯೋಜನೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ನಾವೆಲ್ಲರೂ ಬೆನ್ನೆಲುಬಾಗಿ ನಿಲ್ಲುತ್ತೇವೆ. ಈ ಮೂಲಕ ಇಂಜಿನಿಯರ್‌ಗಳ ಸಂಕಷ್ಟಗಳಿಗೆ ಸ್ಪಂದಿಸಲು ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಾಗಾರದ ಮೂಲಕ ಇಂಜಿನಿಯರ್‌ಗಳ ಅಭಿಪ್ರಾಯಗಳನ್ನು ಆಲಿಸಿ, ತಾಂತ್ರಿಕ ಹಾಗೂ ಆಡಳಿತಾತ್ಮಕ ಸಮಸ್ಯೆಗಳನ್ನು ಬಗೆಹರಿಸಲು ನಾವು ಬದ್ಧರಿದ್ದೇವೆ, ಎಂದು ಅವರು ಭರವಸೆ ನೀಡಿದರು.

ಅಭಿವೃದ್ಧಿಯ ಮೈಲಿಗಲ್ಲುಗಳು: 2013–14ರ ನಂತರ ಈ ಭಾಗದ ಅಭಿವೃದ್ಧಿಗೆ ಅನುದಾನದ ಪ್ರಮಾಣ ಗಣನೀಯವಾಗಿ ಹೆಚ್ಚಾಗಿದ್ದು, ಕಳೆದ ಮೂರು ವರ್ಷಗಳಲ್ಲಿ ಸುಮಾರು 5,000 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಮಂಡಳಿಯ ವತಿಯಿಂದ ವಿವಿಧ ಇಲಾಖೆಗಳಿಗೆ ಅಗತ್ಯವಿರುವ ಮೂಲಸೌಕರ್ಯ ಕಲ್ಪಿಸಲಾಗುತ್ತಿದ್ದು, ಯಾವುದೇ ಇಲಾಖೆಯ ಮೊರೆ ಹೋಗದೆ ಸ್ವತಂತ್ರವಾಗಿ ಕಾರ್ಯನಿರ್ವಹಿಸುವಷ್ಟು ಹಣಕಾಸು ನೆರವು ಆರ್ಥಿಕ ಸಬಲತೆಯನ್ನು ಮಂಡಳಿ ಹೊಂದಿದೆ ಎಂದು ಹೇಳಿದರು.

ಇ–ಪ್ರೋಕ್ಯೂಸ್‌ಮೆಂಟ್ ವ್ಯವಸ್ಥೆಯ ಮೂಲಕ ಯೋಜನೆಗಳ ಅನುಮೋದನೆ, ಟೆಂಡರ್ ಪ್ರಕ್ರಿಯೆ ಮತ್ತು ಪಾವತಿಯನ್ನು ಸಂಪೂರ್ಣ ಡಿಜಿಟಲೀಕರಣಗೊಳಿಸಲಾಗಿದ್ದು, ಪಾರದರ್ಶಕತೆಗೆ ಆದ್ಯತೆ ನೀಡಲಾಗಿದೆ. ಇಂಜಿನಿಯರ್‌ಗಳಿಗೆ ಕೇವಲ ಕಾಮಗಾರಿಗಳ ಉಸ್ತುವಾರಿ ಮಾತ್ರವಲ್ಲದೆ, ಗುಣಮಟ್ಟದ ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವ ಜವಾಬ್ದಾರಿಯೂ ಇದೆ. ಇಲಾಖೆಗಳಲ್ಲಿನ ಸಿಬ್ಬಂದಿ ಕೊರತೆಯನ್ನು ನೀಗಿಸಲು ಮತ್ತು ಸಾಮರ್ಥ್ಯ ವರ್ಧನೆಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ವಿಸ್ತಾರವಾಗಿ ಮಾತನಾಡಿದರು.

ಕೃಷಿ, ಕೈಗಾರಿಕೆ, ಜವಳಿ, ಪ್ರವಾಸೋದ್ಯಮ ಮತ್ತು ಶಿಕ್ಷಣದಂತಹ ಕ್ಷೇತ್ರಗಳಲ್ಲಿ ಅಭಿವೃದ್ಧಿ ಸಾಧಿಸುವುದು ಮಂಡಳಿಯ ಮುಖ್ಯ ಗುರಿಯಾಗಿದೆ. ಈಗಾಗಲೇ 24,000 ಕೋಟಿಗೂ ಹೆಚ್ಚು ಹಣವನ್ನು ಅಭಿವೃದ್ಧಿಗಾಗಿ ಕಳೆದ 5–6 ವರ್ಷಗಳಲ್ಲಿ ಬಳಸಲಾಗಿದೆ ಎಂದು ಹೇಳಿದರು.

ಈ ವರ್ಷ ಈಗಾಗಲೇ ನಾವು ಸರ್ಕಾರದಿಂದ ಕಲ್ಯಾಣ ಕರ್ನಾಟಕ ಭಾಗಕ್ಕೆ ಐದು ಬೇರೆ ಬೇರೆ ಪಾಲಿಸಿಗಳನ್ನು ಕೇಳಿದ್ದೇವೆ. ಅಗ್ರಿಕಲ್ಚರ್ ಅಂಡ್ ಅಲೈಡ್ ಸೆಕ್ಟರ್, ಇಂಡಸ್ಟ್ರಿಯಲ್ ಪಾಲಿಸಿ. ನಮಗೆ ಇಂಡಸ್ಟ್ರಿಯಲ್ ಪಾಲಿಸಿ ಒಂದು ಹೊಸದಾಗಿ ಮಾಡಿ ಕೊಡಬೇಕು ಎಂದು ಬೇಡಿಕೆ ಇಟ್ಟಿದ್ದೇವೆ ಅದು ಈಗ ಅನುಮೋದನೆ ಸಿಕ್ಕಿದೆ ಎಂದರು.

ಕಲಬುರಗಿ ಈಶಾನ್ಯ ವಲಯದ ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರರಾದ ಸುಭಾಷ್ ಶಿವಶಂಕರ ಮಾತನಾಡಿ, ಕೃಷಿ, ಕೈಗಾರಿಕೆ, ಶಿಕ್ಷಣ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಹೊಸ ನೀತಿಗಳನ್ನು ರೂಪಿಸಲಾಗಿದ್ದು, ಅವುಗಳ ಸಮರ್ಪಕ ಅನುಷ್ಠಾನಕ್ಕೆ ಇಂಜಿನಿಯರ್‌ಗಳ ತಾಂತ್ರಿಕ ನೈಪುಣ್ಯತೆ ಅವಶ್ಯಕವಾಗಿದೆ. ಈ ಭಾಗದ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರದ ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕಿದ್ದು, ಮುಂದಿನ ದಿನಗಳಲ್ಲಿ ಕಲ್ಯಾಣ ಕರ್ನಾಟಕವು ರಾಜ್ಯದ ಅತ್ಯಂತ ಅಭಿವೃದ್ಧಿಶೀಲ ಭಾಗವಾಗಿ ಹೊರಹೊಮ್ಮಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇಂಜಿನಿಯರ್‌ಗಳ ಕಲ್ಯಾಣ ಮತ್ತು ಯೋಜನೆಗಳ ಸುಗಮ ಅನುಷ್ಠಾನಕ್ಕಾಗಿ ಸರ್ಕಾರವು ಎಲ್ಲ ರೀತಿಯ ಸಹಕಾರ ನೀಡಲಿದೆ. ಇಂಜಿನಿಯರ್‌ಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ವಿಶೇಷ ಕಾರ್ಯಾಗಾರವೊಂದನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕೆ.ಕೆ.ಆರ.ಡಿ.ಬಿ ಹಣಕಾಸು ಸಹಾಯಕ ನಿಯಂತ್ರಕರಾದ ಇಂದುಶ್ರೀ ಆರ್. ಅವರು ಸ್ವಾಗತಿಸಿದರು.

ನಂತರ ಸಂಪನ್ಮೂಲ ವ್ಯಕ್ತಿಯಾದ ನಿವೃತ್ತ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಅನ್ವರ ಅವರು ಕಾರ್ಯಾಗಾರದ ಸಂಪೂರ್ಣ ಮಾಹಿತಿಯನ್ನು ಪಿ.ಪಿ.ಟಿ ಮೂಲಕ ವಿವರಿಸಿದರು.

ಕಾರ್ಯಕ್ರಮದಲ್ಲಿ ಕೆ.ಕೆ.ಆರ.ಡಿ.ಬಿ ಉಪಕಾರ್ಯದರ್ಶಿ ಸುರೇಖಾ, ಕೆ.ಕೆ.ಆರ.ಡಿ.ಬಿ ಹೆಚ್ಚುವರಿ ನಿರ್ದೇಶಕರಾದ ಪ್ರವೀಣಾ ಪ್ರೀಯಾ ಡೇವಿಡ್, ಕೆ.ಕೆ.ಆರ.ಡಿ.ಬಿ ಹಣಕಾಸು ನಿಯಂತ್ರಕರಾದ ಪವನಕುಮಾರ, ಕೆ.ಕೆ.ಆರ.ಡಿ.ಬಿ ಅಧೀಕ್ಷಕ ಇಂಜಿನಿಯರ ಆನಂದ ಕಮಲಾಪೂರಕರ್ ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ತಾಂತ್ರಿಕ ತಜ್ಞರಾದ ಯಳಸಂಗಿ ಮಠ, ನಿವೃತ್ತ ಮುಖ್ಯ ಇಂಜಿನಿಯರ ಎಂ. ನಾರಾಯಣ್, ಕಲಬುರಗಿ ಅಪ್ಪ ಇಂಜಿನಿರಿಂಗ್ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಸಿದ್ರಾಮಪ್ಪ ಅವಂತಿ ಇತರರು ಸೇರಿದಂತೆ ಬೀದರ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಯ ಎಲ್ಲಸ್ತರದ ಅಧಿಕಾರಿಗಳು ಹಾಗೂ ಮುಖ್ಯ ಇಂಜಿನಿಯರಗಳು ಉಪಸ್ಥಿತರಿದ್ದರು.

# ಪುರಸಭೆಯ ಸ್ಥಾಯಿ ಸಮಿತಿಯ ಅಧ್ಯಕ್ಷ ನೇಮಿಸುವಲ್ಲಿ ಮೀನಾ– ಮೇಷ: ಉಮಾಪತಿ ಶೆಟ್ಟರ್




**ಹಗರಿಬೊಮ್ಮನಹಳ್ಳಿ. ಜು.04** ಇಲ್ಲಿಯ ಪುರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷರ ನೇಮಕ ಮಾಡದೆ ಎರಡು ವರ್ಷ ಮುಂದೂಡುತ್ತಾ ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷ ಆಯ್ಕೆ ವಿಚಾರದಲ್ಲಿ ಮೀನಾ ಮೇಷ ಮಾಡುತ್ತಿರುವುದೇಕೆ.?

ಪುರಸಭೆಯ ಒಟ್ಟು 23 ಸ್ಥಾನಗಳಲ್ಲಿ 12 ಸ್ಥಾನಗಳನ್ನು ಕಾಂಗ್ರೆಸ್ ಸದಸ್ಯರನ್ನು ಹೊಂದಿದ್ದು, ಮೀಸಲಾತಿಗನುಗುಣವಾಗಿ ಅಧ್ಯಕ್ಷ ಉಪಾಧ್ಯಕ್ಷ ಬಹುಮತದೊಂದಿಗೆ ಅಧಿಕಾರ ಕಾಂಗ್ರೆಸ್ ಪಾಲಾಗಿದೆ. ಪುರಸಭೆಯ ಅಧಿನಿಯಮದಂತೆ ಒಬ್ಬ ಪುರಸಭೆ ಸದಸ್ಯರಗೆ ಸ್ಥಾಯಿ ಸಮಿತಿ ಅಧ್ಯಕ್ಷ ಸ್ಥಾನವನ್ನು ಒದಗಿಸಬೇಕು. ಅದು ಆಡಳಿತ ಪಕ್ಷದ ಸದಸ್ಯರಲ್ಲಿ ಯಾರನ್ನಾದರೂ ಮಾಡಬಹುದು. ಇಲ್ಲಿ ಅಧ್ಯಕ್ಷ,ಉಪಾಧ್ಯಕ್ಷ ಮೀಸಲಾತಿ ಕಲ್ಪಿಸಿರುವುದರಿಂದ ಸಾಮಾನ್ಯ ಸದಸ್ಯರಲ್ಲಿ ಒಬ್ಬರಿಗೆ ಸ್ಥಾಯಿ ಸಮಿತಿಗೆ ನೇಮಕ ಮಾಡಲಾಗುವುದು ಎಂದು ಕೇಳಿ ಬರುತ್ತಿತ್ತು. ಆದರೆ ಆಯ್ಕೆ ಮಾಡುವಲ್ಲಿ ತಿಂಗಳು ವರ್ಷ ವಿಳಂಬವಾಗುತ್ತಿರುವುದು ಆಕಾಂಕ್ಷಿ ಸದಸ್ಯರಗಳಲ್ಲಿ ಬೇಸರ ಉಂಟುಮಾಡಿದೆ. ವಾರ್ಡುಗಳಿಂದ ಆಯ್ಕೆಯಾಗಿ ಸದಸ್ಯರಾದ ನಮಗೆ ಇರುವ ಅವಕಾಶವನ್ನು ಪಕ್ಷ ಒದಗಿಸಿಕೊಡುವಲ್ಲಿ ವಿಳಂಬ ಧೋರಣೆ ಮಾಡುತ್ತಿರುವುದು ಸಮಂಜಸವಲ್ಲ. ನಮಗೂ ಒಂದು ಸ್ಥಾನ ಕೊಟ್ಟರೆ ಸಾರ್ವಜನಿಕ ಸಮಸ್ಯೆಗಳು ವಾರ್ಡಗಳ ಮತದಾರರ ನಿರೀಕ್ಷೆ ಹಾಗೂ ಅಭಿವೃದ್ಧಿ ಕೆಲಸ ಮಾಡುವಂತ ಭಾಗ್ಯ ನಮಗೂ ಸಿಗುತ್ತದೆ ಎಂದು ಸದಸ್ಯರ ಮನದ ಮಾತಾಗಿದೆ. ಈಗಾಗಲೇ ಎರಡು ವರ್ಷ ಮುಗಿತಾ ಬಂದರು ಸ್ಥಾಯಿ ಸಮಿತಿ ಅಧ್ಯಕ್ಷರ ವಿಚಾರ ಮುನ್ನಲೆಗೆ ಬರುತ್ತಿಲ್ಲ. ಮುಂದಿನ ಮೂರು ವರ್ಷದ ಅವಧಿಗಾದರೂ ಸ್ಥಾಯಿ ಸಮಿತಿಯ ಅಧ್ಯಕ್ಷರನ್ನು ನೇಮಿಸಿ ಸದಸ್ಯರಿಗೆ ಸ್ಥಾನಮಾನ ಕಲ್ಪಿಸಿ ಕೊಡಬೇಕು ಎಂಬುವುದೇ ಕೆಲವು ಸದಸ್ಯರ ಕೋರಿಕೆ. ಈ ವಿಚಾರದಲ್ಲಿ ಮಾಜಿ ಶಾಸಕ ಕಾಂಗ್ರೆಸ್ ಮುಖಂಡ ಭೀಮ ನಾಯ್ಕ್ ಮನಸ್ಸು ಮಾಡುತ್ತಿಲ್ಲ.ಆರಂಭದಲ್ಲಿ ನಿಮಗೆ ಸ್ಥಾಯಿ ಸಮಿತಿ ಅಧ್ಯಕ್ಷರನ್ನಾಗಿ ಮಾಡುತ್ತೇನೆ ಎಂದು ಭರವಸೆ ನೀಡಿದ್ದರು. ಆದರೆ ಅದು ಇನ್ನೂ ಈಡೇರದೆ ವಿಳಂಬವಾಗುತ್ತಿರುವುದರಿಂದ ಸದಸ್ಯರು ನಿರಾಶೆಗೊಂಡಿದ್ದಾರೆ. ಮನಸ್ಸು ಮಾಡಿದರೆ ಭೀಮನಾಯ್ಕ್ ನಾಳೆಯೇ ಸ್ಥಾಯಿ ಸಮಿತಿಗೆ ನೇಮಕ ಮಾಡಬಹುದು. ಆದರೆ ಅದರಿಂದ ತಟಸ್ಥವಾಗಿರುವುದು ಏಕೆ ಎಂಬುದೇ ಪ್ರಜ್ಞಾವಂತ ನಾಗರಿಕ ಪ್ರಶ್ನೆ.?

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE